ಹುಬ್ಬಳ್ಳಿ-ಧಾರವಾಡ, ಗದಗ, ಬಾಗಲಕೋಟೆ, ವಿಜಯಪುರ, ಕೊಪ್ಪಳ, ವಿಜಯನಗರ, ಬೆಳಗಾವಿ, ದಾವಣಗೆರೆ, ರಾಯಚೂರ, ಯಾದಗಿರಿ

ಪಬ್ಲಿಕ್ ಫಾಸ್ಟ್ 31

PUBLIC FAST

ಕನ್ನಡ ದಿನಪತ್ರಿಕೆ

ಧ್ವನಿ ನಿಮ್ಮದು ಸಹಾಯ ನಮ್ಮದು... DAILY NEWS PAPER

E-mail : publicfast31@gmail.com

ಸಂಪಾದಕರು : ಐಶ್ವರ್ಯ ಪಿ. ಉಪ ಸಂಪಾದಕರು : ಇಮ್ರಾನ್ ಹೆಬ್ಬಳ್ಳಿ

● ಸಂಪುಟ : 01 ● ಸಂಚಿಕೆ : 123 ● ದಿನಾಂಕ : 22-09-2026 ಮಂಗಳವಾರ KNKAN/26/A2600 ಪುಟ : 4 ಬೆಲೆ : ರೂ. 2 Mobile : 9916890865

ರೈತರ ರಕ್ಷಣೆ ನಮ್ಮ ಬದ್ಧತೆ: ಸಿಎಂ ಡಿಕೆಶಿ

ಬೆಂಗಳೂರು : ರೈತರ ರಕ್ಷಣೆ ನಮ್ಮ ಬದ್ಧತೆ, ರೈತರ ರಕ್ಷಣೆ ವಿಚಾರದಲ್ಲಿ ನಾನು ರಾಜಕಾರಣವನ್ನು ಬದಿಗಿಟ್ಟು ಒಗ್ಗೂಡಿ ಎಲ್ಲರೂ ರೈತರ ರಕ್ಷಣೆ ಮಾಡೋಣ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿಧಾನಸಭೆಯಲ್ಲಿಂದು ಹೇಳಿದರು.

ಪಶ್ಚಿಮಘಟ್ಟ ಭಾಗದ ಜನರ ಬದುಕಿಗೆ ಮಾರಕ ಎನಿಸಿರುವ ಡಾ. ಕಸ್ತೂರಿ ರಂಗನ್ ವರದಿ ಬಗ್ಗೆ ವಿಧಾನಸಭೆಯಲ್ಲಿಂದು ಮಹತ್ವದ ಚರ್ಚೆ ನಡೆದಿದ್ದು, ಪ್ರಾಸ್ತಾವಿಕವಾಗಿ ಚರ್ಚೆಯ ಆರಂಭದಲ್ಲಿ ಮಾತನಾಡಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು, ಕಸ್ತೂರಿ ರಂಗನ್ ವರದಿಯ ಜಾರಿಯಿಂದ ಪಶ್ಚಿಮಘಟ್ಟದ ಜನರ ಬದುಕಿಗೆ ತೊಂದರೆಯಾಗುತ್ತದೆ ಎಂಬ ಆತಂಕ ವ್ಯಕ್ತವಾಗಿದೆ. ರೈತರ ಆತಂಕವನ್ನು ದೂರ ಮಾಡಿ ಅವರ ರಕ್ಷಣೆ ಮಾಡುವ ಬದ್ಧತೆ, ಆಶಯದೊಂದಿಗೆ ಈ ವಿಶೇಷ ಅಧಿವೇಶನವನ್ನು ಕರೆದಿದ್ದೇನೆ. ರೈತರ ರಕ್ಷಣೆ ನಮ್ಮ ಬದ್ಧತೆ ಎಂದರು.

ಪಶ್ಚಿಮಘಟ್ಟಕ್ಕೆ ಸಂಬಂಧಿಸಿದಂತೆ ಕಸ್ತೂರಿ ರಂಗನ್ ವರದಿಯ 10 ಜಿಲ್ಲೆಗಳ ಬದುಕಿಗೆ ಮಾರಕ, ಭಯದ ವಾತಾವರಣ ಆ ಭಾಗದಲ್ಲಿದ್ದು, ರೈತರ ಭಯ ಆತಂಕವನ್ನು ದೂರ ಮಾಡಲು ಏನು ಮಾಡಬೇಕು, ಯಾವ ರೀತಿಯ ತೀರ್ಮಾನಗಳನ್ನು ರಾಜ್ಯ ಸರ್ಕಾರ ಕೈಗೊಳ್ಳಬೇಕು ಎಂಬ ಬಗ್ಗೆ ಜನಪ್ರತಿನಿಧಿಗಳ ಅಭಿಪ್ರಾಯ ಪಡೆಯಲು ಈ ಅಧಿವೇಶನ ನಡೆಸಲಾಗುತ್ತಿದೆ. ಈ ಅಧಿವೇಶನದಲ್ಲಿ ವ್ಯಕ್ತವಾಗುವ ಅಭಿಪ್ರಾಯಗಳನ್ನು ಗಮನದಲ್ಲಿಟ್ಟುಕೊಂಡು ಜನರ ಬದುಕನ್ನು ರಕ್ಷಿಸಲು ಏನೆಲ್ಲಾ ಮಾಡಬೇಕೋ ಅದನ್ನು ನಾವು ನೀವು ಒಟ್ಟಾಗಿ ಮಾಡೋಣ. ರಾಜಕೀಯ ಬದಿಗಿಟ್ಟು ರೈತರ ರಕ್ಷಣೆ ಮಾಡೋಣ ಎಂದರು

ಕಸ್ತೂರಿ ರಂಗನ್ ವರದಿಯ ಭಯ ನಿವಾರಣೆಗೆ ಯಾವ ರೀತಿ ಕ್ರಮ ಕೈಗೊಳ್ಳಬೇಕು, ಏನು ಪರಿಹಾರ ಎಲ್ಲವನ್ನು ಚರ್ಚೆ ಮಾಡೋಣ. ಜನರ ಭಾವನೆ ಮೇಲೆ ನಾವುಗಳೆಲ್ಲಾ ತೀರ್ಮಾನ ಮಾಡಬೇಕಿದೆ ಎಂದು ಹೇಳಿದರು.

ಕಸ್ತೂರಿರಂಗನ್ ವರದಿಗೆ ಸಂಬಂಧಿಸಿದಂತೆ ವರದಿಯನ್ನು



ತಿರಸ್ಕರಿಸಬೇಕು. ವರದಿ ಅಧ್ಯಯನಕ್ಕೆ ಉನ್ನತ ಮಟ್ಟದ ಸಮಿತಿ ರಚಿಸಬೇಕೋ, ಭೌತಿಕ ಸಮಿತಿ ರಚಿಸಬೇಕೋ, ಕೇರಳ ಮಾದರಿ ರಚಿಸಬೇಕೋ. ವಿಧಾನಸಭೆಯಲ್ಲಿ ವರದಿ ಜಾರಿ ವಿರೋಧಿಸಿ ನಿರ್ಣಯ ಕೈಗೊಳ್ಳಬೋಕೋ, ಕೇಂದ್ರ ಸರ್ಕಾರಕ್ಕೆ ಸರ್ವಪಕ್ಷಗಳ ನಿಯೋಗ ಕರೆದೊಯ್ಯಬೇಕು ಹೀಗೆ ಹತ್ತು ಹಲವು ಸಲಹೆಗಳು ಬಂದಿವೆ. ಸರ್ಕಾರವೇ ಈ ಬಗ್ಗೆ ತೀರ್ಮಾನ ಮಾಡುವುದು ಬೇಡ. ವಿಧಾನಸಭೆಯಲ್ಲಿ ಈ ಬಗ್ಗೆ ತೀರ್ಮಾನ ಮಾಡೋಣ ಎಂಬ ಆಶಯದೊಂದಿಗೆ ಅಧಿವೇಶನ ಕರೆದಿದ್ದೇನೆ. ರೈತರ ಬದುಕನ್ನು ರಕ್ಷಿಸಲು ಏನು ಮಾಡಬೇಕು ಎಂಬ ಸಲಹೆಗಳನ್ನು ಜನಪ್ರತಿನಿಧಿಗಳು ನೀಡಿದರೆ ಅದನ್ನು ಸರ್ಕಾರ ಸ್ವೀಕಾರ ಮಾಡುತ್ತದೆ ಎಂದರು.

ಈ ಹಿಂದೆ ಅಧಿವೇಶನ ನಡೆದಿತ್ತಾದರೂ ಪ್ರತಿಪಕ್ಷಗಳ ರಾಜಕೀಯ ಉದ್ದೇಶದಿಂದ ಏನನ್ನೂ ಚರ್ಚೆ ಮಾಡಲು ಆಗಲಿಲ್ಲ. ಜನರ ಭಾವನೆ ಬದುಕು ಮುಖ್ಯ. ಈಗಾಗಲೇ ರಾಜ್ಯದಲ್ಲಿ ಬರ ಇದೆ. 123 ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಿದ್ದೇವೆ. ಹಾಗಾಗಿ ಈ ಎಲ್ಲ ವಿಚಾರಗಳ ಬಗ್ಗೆ ಚರ್ಚಿಸಲು ಅಧಿವೇಶನ ಕರೆದಿದ್ದೇವೆ. ನಾನು ಬರಪೀಡಿತ ಜಿಲ್ಲೆಗಳಲ್ಲೂ ಪ್ರವಾಸ ಮಾಡಿ ಅಲ್ಲಿನ ಪರಿಸ್ಥಿತಿಯನ್ನು ಕಣ್ಣಾರೆ ನೋಡಿದ್ದೇನೆ. ಶಾಸಕರುಗಳ ಜತೆಯೂ ಸಭೆಗಳನ್ನು ನಡೆಸಿ ಚರ್ಚಿಸಿದ್ದೇನೆ ಎಂದರು

ರೈತರಿಗೆ ತೊಂದರೆಯಾದರೆ ಅವರ ನೋವಿಗೆ ನಾವು ಸ್ಪಂದಿಸಬೇಕು. ಈ ಹಿಂದಿನ ಅಧಿವೇಶನದಲ್ಲಿ ಪ್ರತಿಪಕ್ಷಗಳು ರಾಜಕೀಯವಾಗಿ ಸಚಿವರೊಬ್ಬರ ರಾಜೀನಾಮೆಗೆ ಆಗ್ರಹಿಸಿ ಹೋರಾಟ ಮಾಡಿದ್ದರಿಂದ ಯಾವ ವಿಚಾರವೂ ಚರ್ಚೆಯಾಗಲಿಲ್ಲ. ನಿರಪರಾಧಿ ಸಚಿವರೊಬ್ಬರು ರಾಜೀನಾಮೆ ನೀಡಿದಂತಾಯಿತು ಎಂದು ಹೇಳಿದರು.

ನಾನು ಪಶ್ಚಿಮಘಟ್ಟದ ಪ್ರದೇಶದಲ್ಲೂ ಕಳೆದ 3-4 ದಿನಗಳಲ್ಲಿ ನಾನು ಪ್ರವಾಸ ಕೈಗೊಂಡು ಕಸ್ತೂರಿ ರಂಗನ್ ವರದಿ ಅಲ್ಲಿನ ರೈತರ ದುಃಖ ದುಮ್ಮಾನಗಳನ್ನು ಕೇಳಿ ಬಂದಿದ್ದೇನೆ. ಈ ವಿಚಾರದಲ್ಲಿ ಸರ್ಕಾರ ನಡೆ ನಿಲುವು ಏನಿರಬೇಕು ಎಂಬ ಬಗ್ಗೆ ಈ ಸದನದಲ್ಲೇ ಮಾಡೋಣ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.

ಪರಿಷತ್‌ನಲ್ಲಿ ಕಸ್ತೂರಿ ರಂಗನ್ ವರದಿ ಟಿಪ್ಪಣಿ ಮಂಡನೆ

ಬೆಂಗಳೂರು : ವಿಧಾನಮಂಡಲದ ಮೂರು ದಿನಗಳ ವಿಶೇಷ ಅಧಿವೇಶನದ ಮೊದಲ ದಿನವೇ ಮೇಲ್ಮನೆಯಲ್ಲಿ ವಂದೇ ಮಾತರಂ ಗೀತೆಯ ವಿಚಾರವು ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ಮಾತಿನ ಚಮಮಕಿ ಗದ್ದಲ ನಡುವೆ ಉಪಮುಖ್ಯಮಂತ್ರಿ ಪರಮೇಶ್ವರ್ ಕಸ್ತೂರಿರಂಗನ್ ವರದಿ ವಿಚಾರವನ್ನು ಪ್ರಸ್ತಾಪಿಸಿದ ಬಳಿಕವು ಪ್ರತಿಪಕ್ಷ ಸದಸ್ಯರು ಸದನದ ಬಾವಿಗಿಳಿದು ಪ್ರತಿಭಟನೆ ನಡೆಸಿದ್ದರಿಂದ ಸಭಾಪತಿ ಕಲಾಪವನ್ನು 10 ನಿಮಿಷ ಮುಂದೂಡಿದರು.

ಗದ್ದಲದ ನಡುವೆ ಉಪಮುಖ್ಯಮಂತ್ರಿ ಪರಮೇಶ್ವರ್ ಅವರು ಕಸ್ತೂರಿರಂಗನ್ ವರದಿಯನ್ನು ಒಪ್ಪುವುದಿಲ್ಲ ಎಂಬ ನಿಲುವನ್ನು ರಾಜ್ಯ ಸರ್ಕಾರ ಈಗಾಗಲೇ ಹಲವು ಬಾರಿ ಕೇಂದ್ರ ಸರ್ಕಾರಕ್ಕೆ ಪತ್ರಗಳ ಮೂಲಕ ತಿಳಿಸಿದೆ. ಕೇಂದ್ರ ಸರ್ಕಾರ ಪದೇಪದೇ ಅಧಿಸೂಚನೆಗಳನ್ನು ಹೊರಡಿಸುತ್ತಿದ್ದು, ಇದೀಗ ಹೊರಡಿಸಿರುವ ಕರಡು ಅಧಿಸೂಚನೆಗೂ ರಾಜ್ಯ ಸರ್ಕಾರದ ವಿರೋಧವಿದೆ ಎಂದು ಸ್ಪಷ್ಟಪಡಿಸಿದರು.

ಈ ಕಾರಣಕ್ಕಾಗಿಯೇ ವಿಶೇಷ ಅಧಿವೇಶನದಲ್ಲಿ ವಿಚಾರವನ್ನು ಚರ್ಚೆಗೆ ತಂದಿದ್ದೇವೆ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಈಗಾಗಲೇ ರೈತರು, ಸ್ಥಳೀಯ ಜನರು ಹಾಗೂ ಜನಪ್ರತಿನಿಧಿಗಳ ಅಭಿಪ್ರಾಯಗಳನ್ನು ಸಂಗ್ರಹಿಸಿರುವುದರಿಂದ, ಆ ಎಲ್ಲ ಅಭಿಪ್ರಾಯಗಳನ್ನೂ ಸದನದಲ್ಲಿ ಸಮಗ್ರವಾಗಿ ಚರ್ಚಿಸಬೇಕಾಗಿದೆ ಎಂದು ಪರಮೇಶ್ವರ್ ಹೇಳಿದರು.

ವಿಶೇಷ ಅಧಿವೇಶನದಲ್ಲಿ ವರದಿ ಕುರಿತು ಸಮಗ್ರ ಚರ್ಚೆ ನಡೆಸುವ ಉದ್ದೇಶವಿದೆ ಎಂದು ಅವರು ಈ ಹಿಂದೆ ಕೂಡ ಹೇಳಿದ್ದರು ಎಂದರು.ಈ ವೇಳೆ, ಪರಮೇಶ್ವರ್



ಅವರು ಪ್ರತಿಪಕ್ಷಗಳ ನಿಲುವನ್ನೇ ಪ್ರಶ್ನಿಸಿ, ವಿಪಕ್ಷಗಳು ಕಸ್ತೂರಿರಂಗನ್ ವರದಿಯ ಪರವೋ ಅಥವಾ ವಿರೋಧವೋ ಎಂಬುದನ್ನು ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದರು. ಪ್ರತಿಪಕ್ಷಗಳು ತಮ್ಮ ನಿಲುವನ್ನು ಹೇಳದಿದ್ದರೆ, ಜನರಿಗೆ ಅವರು ವರದಿಯ ಪರವಾಗಿದ್ದಾರೆ ಎಂಬ ಸಂದೇಶ ಹೋಗಬೇಕಾಗುತ್ತದೆ ಎಂದು ಅವರು ಹೇಳಿದರು. ಈ ಹೇಳಿಕೆ ಸದನದಲ್ಲಿ ಮತ್ತಷ್ಟು ರಾಜಕೀಯ ಬಿಸಿ ಏರಲು ಕಾರಣವಾಯಿತು.

ಪರಮೇಶ್ವರ್ ಅವರ ಪ್ರಸ್ತಾಪದ ನಡುವೆಯೇ ವಿಪಕ್ಷ ಸದಸ್ಯರು ಕಸ್ತೂರಿರಂಗನ್ ವರದಿಗೆ ತಮ್ಮ ವಿರೋಧ ವ್ಯಕ್ತಪಡಿಸಿದರು. ಈ ವೇಳೆ ಆಡಳಿತ ಪಕ್ಷ ಮತ್ತು ವಿಪಕ್ಷ ಸದಸ್ಯರ ನಡುವೆ ವಾಕ್ಸಮರ ನಡೆಯಿತು.

ಬಿಜೆಪಿ ನಾಯಕ ಸಿ.ಟಿ. ರವಿ ಅವರು ಕಸ್ತೂರಿರಂಗನ್ ವರದಿ ಹಾಗೂ ಅದರ ಹಿನ್ನೆಲೆಯ ಕುರಿತು ಕಾಂಗ್ರೆಸ್ ವಿರುದ್ಧ ಹೇಳಿಕೆ ನೀಡಿದರು. ವರದಿಯ ವಿಚಾರದಲ್ಲಿ ಕಾಂಗ್ರೆಸ್‌ನ ನಿಲುವನ್ನು ಪ್ರಶ್ನಿಸಿದ ಅವರು, ಈ ಕುರಿತು ವಿಷಾದ ವ್ಯಕ್ತಪಡಿಸಬೇಕು ಎಂಬ ಅಭಿಪ್ರಾಯವನ್ನು ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ವ್ಯಕ್ತಪಡಿಸಿದರು. ಇದರ ನಡುವೆ ಸದನದಲ್ಲಿ ಘೋಷಣೆಗಳು ಮುಂದುವರಿದಿದ್ದರಿಂದ ಕಲಾಪದ ಸಹಜ ಪ್ರಕ್ರಿಯೆಗೆ ಅಡ್ಡಿಯಾಯಿತು.

ಸೆ.21ರಿಂದ 23ರವರೆಗೆ ನಡೆಯುತ್ತಿರುವ ವಿಶೇಷ ಅಧಿವೇಶನವನ್ನು ಮುಖ್ಯವಾಗಿ ಕಸ್ತೂರಿರಂಗನ್ ವರದಿ ಮತ್ತು ರಾಜ್ಯದ ಬರ ಪರಿಸ್ಥಿತಿ ಕುರಿತು ಚರ್ಚಿಸಲು ಕರೆಯಲಾಗಿದೆ. ಸೆ.21ರಂದು ಕಸ್ತೂರಿರಂಗನ್ ವರದಿ, ನಂತರದ ದಿನಗಳಲ್ಲಿ ರೈತರ ಸಮಸ್ಯೆಗಳು ಮತ್ತು ಬರ-ಕ್ಕೆ ಸಂಬಂಧಿಸಿದ ವಿಷಯಗಳ ಚರ್ಚೆಗೆ ಅವಕಾಶ ಕಲ್ಪಿಸಲಾಗಿದೆ.

ಅಂಜುಮನ್ ಮಹಾವಿದ್ಯಾಲಯದಲ್ಲಿ ವಿಶ್ವ ಓಝೋನ್ ದಿನಾಚರಣೆ

ಭವಿಷ್ಯಕ್ಕಾಗಿ ಸುಸ್ಥಿರ ಪರಿಸರ ನಿರ್ಮಾಣ ಪ್ರತಿಯೊಬ್ಬರ ಜವಾಬ್ದಾರಿ: ಪ್ರಾಚಾರ್ಯ ಡಾ.ಎನ್. ಬಿ. ನಾಲತವಾಡ

ಧಾರವಾಡ : ಓಝೋನ್ ಪದರದ ಮಹತ್ವ, ಪರಿಸರ ಸಂರಕ್ಷಣೆ ಮತ್ತು ಭವಿಷ್ಯದ ಪೀಳಿಗೆಗಾಗಿ ಸುಸ್ಥಿರ ಪರಿಸರ ನಿರ್ಮಾಣದಲ್ಲಿ ಪ್ರತಿಯೊಬ್ಬರು ಹೊಣೆಗಾರರಾಬೇಕು. ಪರಿಸರ ಕಾಪಾಡದಿದ್ದರೆ ಮುಂದಿನ ಜೀವನ ಕಷ್ಟಕರ ಎಂದು ಇಲ್ಲಿನ ಅಂಜುಮನ್ ಪದವಿ ಮಹಾವಿದ್ಯಾಲಯ ಪ್ರಾಚಾರ್ಯರಾದ ಡಾ. ಎನ್. ಬಿ. ನಾಲತವಾಡ ಅವರು ಅಭಿಪ್ರಾಯಪಟ್ಟರು.

ಅಂಜುಮನ್ ಪದವಿ ಮಹಾವಿದ್ಯಾಲಯದ ಭೂಗೋಳಶಾಸ್ತ್ರ ವಿಭಾಗದ ವತಿಯಿಂದ ನಿನ್ನೆ ನಡೆದ 'ವಿಶ್ವ ಓಝೋನ್' ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಅವರು ಮತನಾಡಿದರು. "ಜಾಗತಿಕ ತಂಪಾದ ಗ್ರಹಕ್ಕಾಗಿ ಕ್ರಮ ? ಉಟಠಭಿಚಟ ಂಭಿಣುಠಟ ಜಿಡಿ ಚಿ ಅಠಿಟಜಡಿ ಕಟಚಿಟಿಜಣ" ಎಂಬ ಘೋಷವಾಕ್ಯದೊಂದಿಗೆ' ಈ ದಿನ ಆಚರಣೆ ಮಾಡಲಾಯಿತು.

ಓಝೋನ್ ಪದರ ಸಂರಕ್ಷಣೆ, ಪರಿಸರ ಸಂರಕ್ಷಣೆ, ಹವಾಮಾನ ಬದಲಾವಣೆ ಹಾಗೂ ಸುಸ್ಥಿರ ಅಭಿವೃದ್ಧಿಯ ಕುರಿತು ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವ



ಉದ್ದೇಶದಿಂದ 'ಕೊಲಾಜ್ ತಯಾರಿ-ಕೆ' ಮತ್ತು 'ಚಿತ್ರಕಲೆ' ಸ್ಪರ್ಧೆಗಳನ್ನು ಆಯೋಜಿಸಲಾಗಿತ್ತು. ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗವಹಿಸಿ ತಮ್ಮ ಸೃಜನಶೀಲತೆಯ ಮೂಲಕ ಪರಿಸರ ಸಂರಕ್ಷಣೆಯ ಸಂದೇಶವನ್ನು ಸಾರಿದರು.

ಸ್ಪರ್ಧೆಯಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳಿಗೆ ಸ್ಥಳದಲ್ಲಿ ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರಗಳನ್ನು ವಿತರಿಸಲಾಯಿತು. ಕೊಲಾಜ್ ತಯಾರಿಕೆ ಸ್ಪರ್ಧೆಯಲ್ಲಿ ಉಮೇಜಾ ಶೇಖ್ ಪ್ರಥಮ(ಪದವಿ ವಿಭಾಗ) ಅತೀಭಾ ನಾಯಕವಾಡಿ ದ್ವಿತೀಯ (ಪಿಯುಸಿ ವಿಭಾಗ) ಹಾಗೂ ತೃತೀಯ ಬೀಬೀ ಆಯುಶ್ ಹಾನಗಲ್ (ಪದವಿ ವಿಭಾಗ) ಅವರು ಪಡೆದುಕೊಂಡರು.

ಚಿತ್ರಕಲಾ ಸ್ಪರ್ಧೆಯಲ್ಲಿ ಶಫೀಯಾ ಚಾನ್ಸವಾಲೆ ಪ್ರಥಮ (ಪಿಯುಸಿ ವಿಭಾಗ) ಭೀಭೀ ಅಮೀಬ್ ಬೆಟಗೇರಿ ದ್ವಿತೀಯ (ಪದವಿ ವಿಭಾಗ) ಹಾಗೂ ನಯಾಜ್ ಸಕ್ರಾವ್ಜ್(ಪಿಯುಸಿ ವಿಭಾಗ) ತೃತೀಯ ಬಹುಮಾನ ಪಡೆದರು.

ಡಾ. ಮುಬೀನ್ ಎಸ್ ಬೆಳಗಾಂವ್ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು. ಐಕ್ಯೂಎಸಿ ಸಂಯೋಜ-ಕರಾದ ಡಾ. ತಾಜುನಿಸಾ, ಭೂಗೋಳಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಶ್ರೀಮತಿ ಅಂಜುಂ ಶೈಖ್, ಡಾ. ಗಿರೀಶ್ ಎ. ಸಿ. ಹಾಜರಿದ್ದರು.

ಕಾರ್ಯಕ್ರಮದ ಆರಂಭದಲ್ಲಿ ವಿದ್ಯಾರ್ಥಿನಿ ಉಮೈಜಾ ಶೈಖ್ ಕುರಾನ್ ಪಠಿಸಿದರು. ವಿದ್ಯಾರ್ಥಿನಿ ದೇವಮ್ಮ ಶ್ಲೋಕ ಪಠಣ ಮಾಡಿದರು. ಡಾ. ಶಾನೂರ್ ಜಮಖಂಡಿ ಕಾರ್ಯಕ್ರಮ ಸ್ವಾಗತಿಸಿ ಅತಿಥಿಗಳನ್ನು ಪರಿಚಯಿಸಿದರು. ಡಾ. ಗಿರೀಶ್ ಎ. ಸಿ. ಕಾರ್ಯಕ್ರಮ ನಿರೂಪಿಸಿದರು. ಭೂಗೋಳಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಶ್ರೀಮತಿ ಅಂಜುಂ ಶೈಖ್ ವಂದನಾರ್ಪಣೆ ಮಾಡಿದರು. ನೂರಾರು ವಿದ್ಯಾರ್ಥಿಗಳು ಹಾಗೂ ಮಹಾವಿದ್ಯಾಲಯದ ಬೋಧಕ ಸಿಬ್ಬಂದಿಗಳು ಸಕ್ರಿಯವಾಗಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

ಪೌರತ್ವ ತರಬೇತಿ ಶಿಬಿರದ ಉದ್ಘಾಟನೆ



ಮುನವಳ್ಳಿ : ಪಟ್ಟಣದ ಶ್ರೀ ಪಂಚಲಿಂಗೇಶ್ವರ ಕಲ್ಯಾಣ ಮಂಟಪದಲ್ಲಿ ಸ್ಥಳೀಯ ಜೆ.ಎಸ್.ಪಿ ಸಂಘದ ಶ್ರೀ ಬಿ.ಎಫ್.ಯಲಿಗಾರ ಶಿಕ್ಷಣ ಮಹಾವಿದ್ಯಾಲಯದ ಮೂರು ದಿನಗಳ ಪೌರತ್ವ ತರಬೇತಿ ಶಿಬಿರದ ಉದ್ಘಾಟನಾ ಸಮಾರಂಭ ಮಂಗಳವಾರ ಜರುಗಿತು. ಸಂಸ್ಥೆ ಕೋಶಾಧ್ಯಕ್ಷ ರವೀಂದ್ರ ಯಲಿಗಾರ ಶಿಬಿರವನ್ನು ಉದ್ಘಾಟಿಸಿದರು.

ಸೋಮಶೇಖರ ಮಠದ ಶ್ರೀ ಮುರುಘೇಂದ್ರ ಶ್ರೀಗಳು ಸಾನಿಧ್ಯ ವಹಿಸಿ ಆಶೀರ್ವಚನದಲ್ಲಿ ಸರ್ವರೋಗಕ್ಕು ಯೋಗ ಮದ್ದು ಆಗಿದೆ ಮಕ್ಕಳು ಯೋಗದಲ್ಲಿ ತಲ್ಲಿನರಾಗಿ ರಾಜ್ಯ ರಾಷ್ಟ್ರಮಟ್ಟದಲ್ಲಿ ಹೆಸರು ತರುವಂತಾಗಬೇಕೆಂದರು.

ಸಂಸ್ಥೆಯ ಕೋಶಾಧ್ಯಕ್ಷ ಎಮ್.ಆರ್.ಗೋಪಶೆಟ್ಟಿ ಅಧ್ಯಕ್ಷತೆ ವಹಿಸಿದ್ದರು.

ನಿಪ್ಪಾಣಿ ಕೆ.ಎಲ್.ಇ ಸಂಸ್ಥೆಯ ಪ್ರಾಚಾರ್ಯ ಡಾ. ಬಿ.ಬಿ.ಪೋಲೀಸ ಪಾಟೀಲ ಮಾತನಾಡಿ ಶಿಕ್ಷಕರು ಕೇವಲ ಪಠ್ಯಪುಸ್ತಕ ಬೋಧನೆಗೆ ಸೀಮಿತವಾಗದೆ ಉತ್ತಮ ಸಮಾಜ ನಿರ್ಮಿಸುವ ದಿಕ್ಸೂಚಿಯಾಗಬೇಕು. ಬಾವಿ ಶಿಕ್ಷಕರಲ್ಲಿ ನಾಯಕತ್ವ ಗುಣ, ಸಾಮಾಜಿಕ ಕಳಕಳಿ, ಶಿಸ್ತು, ಸೌಹಾರ್ದ, ದೇಶಪ್ರೇಮ ಹಾಗೂ ಮಾನವೀಯ ಮೌಲ್ಯಗಳನ್ನು ಬಿತ್ತುವಲ್ಲಿ ಪೌರತ್ವ ತರಬೇತಿ ಶಿಬಿರ ಅತ್ಯಂತ ಪ್ರಮುಖ ಪಾತ್ರ ವಹಿಸುತ್ತದೆ ಎಂದರು.

ಸಂಘದ ಗೌರವ ಕಾರ್ಯದರ್ಶಿ ವಿ.ಎಸ್.ಯಕ್ಕುಂಡಿ ಮಾತನಾಡಿ ಇಂದು ಸಮಾಜಕ್ಕೆ ಕೇವಲ ಅಂಕಗಳಿಸುವ ಶಿಕ್ಷಕರ ಅಗತ್ಯವಿಲ್ಲ, ಬದಲಿಗೆ ಶ್ರೇಷ್ಠ ಮೌಲ್ಯಗಳನ್ನು ವಿದ್ಯಾರ್ಥಿಗಳಲ್ಲಿ ಮೂಡಿಸುವ ಆದರ್ಶ ಶಿಕ್ಷಕರ ಅಗತ್ಯವಿದೆ ಎಂದರು.

ಪ್ರಾಚಾರ್ಯ ಡಾ.ಎ.ಎಸ್.ಅಮೋಘಿಮಠ ಮಾತನಾಡಿ ಪೌರತ್ವ ಶಿಬಿರ ವಿದ್ಯಾರ್ಥಿಗಳಲ್ಲಿ ಸ್ವಾವಲಂಬನೆ, ಶ್ರಮದಾನ ಹಾಗೂ ಸಮುದಾಯ ಸೇವೆ ಮನೋಭಾವ ಹೆಚ್ಚಿಸುತ್ತದೆ ಎಂದರು.

ಪಿ.ವಿ.ಮೋಹರೆ, ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ.ಎ.ಎಸ್. ಅಮೋಘಿಮಠ ಸ್ವಾಗತಿಸಿ ಶಿಬಿರದ ಮಹತ್ವವನ್ನು ತಿಳಿಸಿದರು.

ಸುದಾಕರ ರೇಣಕೆ, ಪತ್ರಕರ್ತ ಟಿ.ಎನ್.ಮುರಂಕರ ಎಫ್.ವಿ.ಭೋವಿ, ಅಮಿತ ಕರಿಕಟ್ಟಿ, ಅಮಿತ ಅಬ್ಬಾರ, ಎ.ಎಲ್.ಬಡಿಗೇರ, ಜಿ.ವಿ.ಬಡಿಗೇರ, ಎಸ್. ಎಸ್.ನಡುವಿನಮನಿ, ಪಿ.ಆರ್.ಯಲ್ಲಯ್ಯಗೋಳ, ಎ.ಎಲ್.ರಾಮದುರ್ಗ, ಪಿ.ಎಂ.ಆಯಾಚಿತ, ಲಕ್ಷಿ ?ಮೇ ಭಾಗನ್ನವರ, ರೇಷ್ಮಾ ಕಾರ್ಲಕಟ್ಟಿ ಇತರರು ಉಪಸ್ಥಿತರಿದ್ದರು. ಪ್ರಾಚಾರ್ಯ ಮುದೆನೂರ ಕಾರ್ಯಕ್ರಮ ನಿರೂಪಸಿದರು, ಪ್ರಾಚಾರ್ಯ ವನಹಳ್ಳಿ ವಂದಿಸಿದರು.



ಗಣೇಶೋತ್ಸವ ಭಾವೈಕ್ಯದ ಹಬ್ಬ: ಶಾಸಕ ಪ್ರಸಾದ ಅಬ್ಬಯ್ಯ



ಹುಬ್ಬಳ್ಳಿ : 'ಗಣೇಶ ಚತುರ್ಥಿ ಭಾವೈಕ್ಯತೆ ಮತ್ತು ಸಾಂಸ್ಕೃತಿಕ ಅರಿವಿನ ಹಬ್ಬವಾಗಿದ್ದು, ಸರ್ವಧರ್ಮದವರು ಒಂದಾಗಿ, ಒಗ್ಗಟ್ಟಿನಿಂದ ಆಚರಿಸಬೇಕು' ಎಂದು ಶಾಸಕ ಪ್ರಸಾದ ಅಬ್ಬಯ್ಯ ಅಭಿಪ್ರಾಯಪಟ್ಟರು.

ಇಲ್ಲಿನ ಮೂರುಸಾವಿರ ಮಠದ ಸಭಾಭವನದಲ್ಲಿ ಸಾರ್ವಜನಿಕ ಗಣೇಶೋತ್ಸವ ಸಮಿತಿಗಳ ಮಹಾಮಂಡಳವು ಶುಕ್ರವಾರ ಹಮ್ಮಿಕೊಂಡಿದ್ದ ಪ್ರತಿಭಾ ಪುರಸ್ಕಾರ ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಅವರು ಮಾತನಾಡಿದರು.

'ಸ್ವಾತಂತ್ರ್ಯ ಸೇನಾನಿ ಬಾಲಗಂಗಾಧರ ತಿಲಕರು ಜನರಲ್ಲಿ ಸ್ವಾತಂತ್ರ್ಯದ ಕಿಚ್ಚು ಹಚ್ಚಲು ಗಣೇಶೋತ್ಸವ ಆರಂಭಿಸಿದರು. ಈ ಸಂಪ್ರದಾಯವನ್ನು ಗಣೇಶೋತ್ಸವ ಸಮಿತಿಗಳ ಮಹಾಮಂಡಳ ಮುಂದುವರಿಸಿ ಕೊಂಡು ಹೊರಟಿರುವುದು ಶ್ಲಾಘನೀಯ' ಎಂದರು.

ಸಾಮಾಜಿಕ ಕಾರ್ಯಕರ್ತ ರಮೇಶ ಮಹಾದೇವಪ್ಪನವರ ಮಾತನಾಡಿದರು. ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಸಾಧಕರನ್ನು ಸನ್ಮಾನಿಸಲಾಯಿತು. ಮಹಾಮಂಡಳದ ಉಪಾಧ್ಯಕ್ಷರಾದ ಅಲ್ತಾಫ್ ನವಾಜ್ ಕಿತ್ತೂರ, ಶಾಂತರಾಜ ಪೋಳ, ಕಾರ್ಯದರ್ಶಿ ಅಮರೇಶ ಹಿಪ್ಪರಗಿ, ಎಸ್.ಎಸ್. ಕಮಡೊಳ್ಳಿ ಶೆಟ್ಟರ್, ಅನಿಲ ಕವಿಶೆಟ್ಟಿ, ಪ್ರೇಮನಾಥ ಚಿಕ್ಕತುಂಬಳ, ಪ್ರಕಾಶ ಬುರಬುರೆ ಇದ್ದರು.



ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವ ಡಾ.ಶರಣಪ್ರಕಾಶ ಪಾಟೀಲರು ಕೆ ಎಚ್ ಪಾಟೀಲ ವೈದ್ಯಕೀಯ ವಿಜ್ಞಾನಿಗಳ ಸಂಸ್ಥೆಯಲ್ಲಿ ಆಸ್ಪತ್ರೆಯ ವಿವಿಧ ವಿಭಾಗಗಳ ಅತ್ಯಾಧುನಿಕ ವೈದ್ಯಕೀಯ ಉಪಕರಣ ಹಾಗೂ ಸೌರ ವಿದ್ಯುತ್ ಉತ್ಪಾದನಾ ಘಟಕ ಲೋಕಾರ್ಪಣೆ ಮಾಡಿದರು. ಈ ಸಂದರ್ಭದಲ್ಲಿ ಜಿಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರಡಗಿ, ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಿಥುನ್ ಎಚ್ ಎನ್, ಅಪರ ಜಿಲ್ಲಾಧಿಕಾರಿ ಡಾ ದುರಗೇಶ್ ಕೆ ಆರ್, ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನ ಸಂಸ್ಥೆಯ ನಿರ್ದೇಶಕ ಡಾ. ಬಸವರಾಜ ಬೊಮ್ಮನಹಳ್ಳಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ ಎಸ್ ಎಸ್ ನೀಲಗುಂದ, ಡಾ. ಕರಿಗೌಡ್ರ, ಡಾ ರಾಘವೇಂದ್ರ ಸೇರಿದಂತೆ ಇತರರು ಇದ್ದರು.

ಆಲಮೇಲ ಪಟ್ಟಣ ಪಂಚಾಯಿತಿ ಉಪಾಧ್ಯಕ್ಷರಾಗಿ ಚಂದ್ರಶೇಖರ ಹಳೆಮನಿ ಆಯ್ಕೆ



ಆಲಮೇಲ: ಪಟ್ಟಣ ಪಂಚಾಯಿತಿಯ ಉಪಾಧ್ಯಕ್ಷರ ಆಯ್ಕೆಗೆ ಗುರುವಾರ ನಡೆದ ಚುನಾವಣೆಯಲ್ಲಿ ಚಂದ್ರಶೇಖರ ಹಳೆಮನಿ ಒಬ್ಬರೇ ನಾಮಪತ್ರ ಸಲ್ಲಿಸಿದ್ದರಿಂದ ಅವಿರೋಧವಾಗಿ ಆಯ್ಕೆಯಾದರು ಎಂದು ಚುನಾವಣಾಧಿಕಾರಿ ಹಾಗೂ ತಹಶೀಲ್ದಾರ್ ಮಲ್ಲಣ್ಣ ಯಲಗೋಡ ತಿಳಿಸಿದರು.

ಪಟ್ಟಣ ಪಂಚಾಯಿತಿಯಲ್ಲಿ ಒಟ್ಟು 19 ಸದಸ್ಯರಿದ್ದು, ಒಬ್ಬ ಸದಸ್ಯರು ರಾಜೀನಾಮೆ ನೀಡಿದ್ದರಿಂದ 18 ಸದಸ್ಯರು ಉಳಿದಿದ್ದರು.

ಇವರಲ್ಲಿ ಬಿಜೆಪಿ ಸದಸ್ಯೆ ಸುಮಾ ಕತ್ತಿ, ಕಾಂಗ್ರೆಸ್ ಸದಸ್ಯೆ ಪ್ರೇಮಾ ಬಮ್ಮನಹಳ್ಳಿ ಹಾಗೂ ನಿಕಟಪೂರ್ವ ಅಧ್ಯಕ್ಷ ಸಾಧಿಕ್ ಸುಂಬಡ ಚುನಾವಣಾ ಪ್ರಕ್ರಿಯೆಗೆ ಗೈರಾಗಿದ್ದರು. ಉಳಿದ 15 ಸದಸ್ಯರು ಚುನಾವಣೆಯಲ್ಲಿ ಹಾಜರಾಗಿ ಹಳೆಮನಿ ಅವರ ಆಯ್ಕೆಗೆ ಬೆಂಬಲ ಸೂಚಿಸಿದರು.

ಚುನಾವಣೆ ಬಳಿಕ ನೂತನ ಉಪಾಧ್ಯಕ್ಷ ಚಂದ್ರಶೇಖರ ಹಳೆಮನಿ ಅವರನ್ನು ಬೆಂಬಲಿಗರು ಅಭಿನಂದಿಸಿದರು. ಬಳಿಕ ಬೆಂಬಲಿಗರೊಂದಿಗೆ ವಿಜಯೋತ್ಸವ ಆಚರಿಸಿದರು.

ಪಟ್ಟಣ ಪಂಚಾಯಿತಿ ಅಧ್ಯಕ್ಷ ಉಮರ ಬಿಳವಾರ, ಕಾಂಗ್ರೆಸ್ ಸದಸ್ಯ ಅಶೋಕ ಕೊಳಾರಿ, ಬಿಜೆಪಿ ಸದಸ್ಯ ಸಂಜೀವಕುಮಾರ ಯಂಟಮಾನ, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಆಯುಬ ದೇವರಮನಿ ಸೇರಿದಂತೆ ಹಲವರು ಇದ್ದರು.

ಸಂಕನಾಳ, ಅಗಸಬಾಳ ಕೆರೆಗೆ ನೀರು ಹರಿಸದಿದ್ದರೆ ಹೋರಾಟ



ಬಸವನಬಾಗೇವಾಡಿ: ತಾಲ್ಲೂಕಿನ ಹೂವಿನ ಹಿಪ್ಪರಗಿ ಹೋಬಳಿ ವ್ಯಾಪ್ತಿಯ ಸಂಕನಾಳ ಹಾಗೂ ಅಗಸಬಾಳ ಕೆರೆಗಳಿಗೆ ನೀರು ಹರಿಸದಿದ್ದರೆ ರೈತರೊಂದಿಗೆ ಉಪವಾಸ ಸತ್ಯಾಗ್ರಹ ನಡೆಸಲಾಗುವುದು ಎಂದು ಅಖಂಡ ಕರ್ನಾಟಕ ರೈತ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಅರವಿಂದ ಕುಲಕರ್ಣಿ ಎಚ್ಚರಿಸಿದರು.

ಬುಧವಾರ ರೈತರೊಂದಿಗೆ ಎರಡೂ ಕೆರೆಗಳಿಗೆ ಭೇಟಿ ನೀಡಿ ಪರಿಶೀಲಿಸಿದ ಬಳಿಕ ಅವರು ಮಾತನಾಡಿದರು.

ಕೆಬಿಜೆಎನ್‌ಎಲ್ ಅಧಿಕಾರಿಗಳು ಜಿಲ್ಲೆಯ ಎಲ್ಲ ಕೆರೆಗಳಿಗೆ ನೀರು ಹರಿಸಲಾಗಿದೆ ಎಂದು ಹೇಳುತ್ತಿದ್ದರೂ, ಸಂಕನಾಳ ಹಾಗೂ ಅಗಸಬಾಳ ಕೆರೆಗಳಿಗೆ ಹಲವು ವರ್ಷಗಳಿಂದ ನೀರುತಲುಪಿಲ್ಲ.ಮುಳವಾಡಏತನೀರಾವರಿ ಯೋಜನೆಯ ಕುದುರಿಸಾಲವಾಡಗಿ ಶಾಖಾ ಕಾಲುವೆಯಿಂದ ನೀರು ಹರಿಸಲಾಗುತ್ತಿದ್ದರೂ, ಕಾಲುವೆಯಲ್ಲಿ ದೂಳು ಹಾಗೂ ಗಿಡಗಂಟಿಗಳು ಬೆಳೆದಿರುವುದರಿಂದನೀರುಸಮರ್ಪಕವಾಗಿ ಮುಂದೆಸಾಗುತ್ತಿಲ್ಲ.ಪರಿಣಾಮನೀರುಪಕ್ಕದ ಜಮೀನುಗಳಿಗೆ ಹರಿದು ವ್ಯರ್ಥವಾಗುತ್ತಿದೆ ಎಂದು ಆರೋಪಿಸಿದರು.

ಕಾಲುವೆಯಕೊನೆಯಅಂಚಿನರೈತರಿಗೆನೀರು ತಲುಪಿಸುವಲ್ಲಿ ಅಧಿಕಾರಿಗಳು ನಿರ್ಲಕ್ಷ್ಯ ವಹಿಸುತ್ತಿದ್ದಾರೆ. ಅಗತ್ಯ ಪ್ರಮಾಣದಲ್ಲಿ ಮೋಟರ್‌ಗಳನ್ನು ಚಾಲನೆ ಮಾಡದೆ ಕೇವಲ ಒಂದೆರಡು ಮೋಟರ್‌ಗಳನ್ನು ಮಾತ್ರ ಬಳಸುತ್ತಿರುವುದರಿಂದ ಕೊನೆ ಭಾಗದ ಕೆರೆ ಹಾಗೂ ಜಮೀನುಗಳಿಗೆ ನೀರು ತಲುಪುತ್ತಿಲ್ಲ. ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಿ ಎರಡೂ ಕೆರೆಗಳನ್ನು ಭರ್ತಿ ಮಾಡಲು ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ರೈತರೊಂದಿಗೆ ಹೋರಾಟ ನಡೆಸಲಾಗುವುದು ಎಂದು ಕುಲಕರ್ಣಿ ತಿಳಿಸಿದರು.

ರೈತ ಸಂಘದ ಜಿಲ್ಲಾಧ್ಯಕ್ಷ ಉಮೇಶ ವಾಲೀಕರ, ರೈತರಾದ ಹಣಮಂತರಾಯ ಗುಣಕಿ, ಮೋಹನಗೌಡ ಪಾಟೀಲ, ಸುಭಾಷಗೌಡ ಪಾಟೀಲ, ಪ್ರಕಾಶ ಶಿವಯೋಗಿ, ಮಲ್ಲನಗೌಡ ನಾಡಗೌಡ, ಶ್ರೀಶೈಲ ಅಂಗಡಗೇರಿ, ಗೌಡಪ್ಪ ಪಾಟೀಲ, ಮುದುಕಣ್ಣ ಅಂಗಡಗೇರಿ, ವಿಜುಗೌಡ ಪಾಟೀಲ, ಶಬ್ಬಿರ ಮುಲ್ಲಾ, ಲಾಲಸಾಬ್ ಮುಲ್ಲಾ, ಮಲ್ಲಯ್ಯಸ್ವಾಮಿ ಹಿರೇಮಠ ಸೇರಿದಂತೆ ಹಲವರು ಹಾಗೂ ರೈತ ಮಹಿಳೆಯರು ಇದ್ದರು.

ಪಿಡಬ್ಲ್ಯುಡಿ ಐಬಿಯನ್ನು ಸ್ಮಾರಕ ಹಾಗೂ ಪ್ರವಾಸಿ ಕೇಂದ್ರವಾಗಿ ಅಭಿವೃದ್ಧಿಪಡಿಸಲು ದಲಿತ ಸಂಘರ್ಷ ಸಮಿತಿ ಆಗ್ರಹ



ವಿಜಯಪುರ: ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರು ವಿಜಯಪುರದಲ್ಲಿ ವಾಸ್ತವ್ಯ ಹೂಡಿದ್ದ ಐತಿಹಾಸಿಕ ಪಿಡಬ್ಲ್ಯುಡಿ ಐಬಿ ಕಟ್ಟಡವನ್ನು ಸಂರಕ್ಷಿಸಿ, ಸ್ಮಾರಕ ಹಾಗೂ ಪ್ರವಾಸಿ ಕೇಂದ್ರವಾಗಿ ಅಭಿವೃದ್ಧಿಪಡಿಸಬೇಕು ಎಂದು ಕರ್ನಾಟಕರಾಜ್ಯದಲಿತಸಂಘರ್ಷ ಸಮಿತಿ (ಡಾ. ಜಿ. ಸಾಗರ ಬಣ) ಜಿಲ್ಲಾ ಸಮಿತಿ ಜಿಲ್ಲಾಡಳಿತವನ್ನು ಆಗ್ರಹಿಸಿದೆ.

ಈ ಕುರಿತು ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರಿಗೆ ಮನವಿ ಸಲ್ಲಿಸಿರುವ ಸಮಿತಿಯ ಜಿಲ್ಲಾ ಸಂಚಾಲಕ ಸಿದ್ದು ರಾಯಣ್ಣನವರ, ಅಂಬೇಡ್ಕರ್ ಅವರ ವಿಜಯಪುರ ಭೇಟಿಯ ಐತಿಹಾಸಿಕ ಮಹತ್ವವನ್ನು ವಿವರಿಸಿ, ಕಟ್ಟಡದ ಸಂರಕ್ಷಣೆ ಮತ್ತು ಅಭಿವೃದ್ಧಿಗೆ ತಕ್ಷಣ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದ್ದಾರೆ.

ಐತಿಹಾಸಿಕ ಘಟನೆಗೆ ಸಾಕ್ಷಿಯಾದ ಕಟ್ಟಡ

1939ರಫೆಬ್ರವರಿ11ಮತ್ತು12ರಂದು ಡಾ.ಬಿ.ಆರ್.ಅಂಬೇಡ್ಕರ್ ಅವರು ವಿಜಯಪುರದ ಪಿಡಬ್ಲ್ಯುಡಿ ಐಬಿಯಲ್ಲಿ ವಾಸ್ತವ್ಯ ಹೂಡಿದ್ದರು. ಈ ಅವಧಿಯಲ್ಲಿ ಬೀಳಗಿಯಲ್ಲಿ ನಡೆದ ಜೋಡಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆಸೋಮನಗೌಡ ಪಾಟೀಲ ಅವರ ಪರವಾಗಿ ತಮ್ಮ ಕಾನೂನು ಪಾಂಡಿತ್ಯದಿಂದ ವಾದ ಮಂಡಿಸಿ, ಪ್ರಕರಣದಲ್ಲಿ ಜಯ ದೊರಕಿಸಿಕೊಟ್ಟಿದ್ದರು ಎಂದು ಸಿದ್ದು ರಾಯಣ್ಣನವರ ಸ್ಮರಿಸಿದ್ದಾರೆ.

ಅದೇ ವರ್ಷದ ಫೆಬ್ರವರಿ 12ರಂದು ವಿಜಯಪುರದಲ್ಲಿ ನಡೆದ ಹರಿಜನರ ಸಮ್ಮೇಳನದಲ್ಲಿ ಬೃಹತ್‌ದಲಿತಸಮುದಾಯವನ್ನು ಉದ್ದೇಶಿಸಿ ಅಂಬೇಡ್ಕರ್ ಅವರು ಮಾತನಾಡಿದ್ದರು. ಸಾಮಾಜಿಕ ಸಮಾನತೆ, ಸ್ವಾಭಿಮಾನ ಮತ್ತು ಹಕ್ಕುಗಳ ಅರಿವಿನ ಸಂದೇಶ ಸಾರಿದ ಈ ಐತಿಹಾಸಿಕ ಘಟನೆಯ ನೆನಪುಗಳನ್ನು ಇಂದಿನ ಪೀಳಿಗೆಗೆ ಪರಿಚಯಿಸುವಅಗತ್ಯವಿದೆಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಶಿಥಿಲ ಕಟ್ಟಡದ ಸಂರಕ್ಷಣೆಗೆ ಆಗ್ರಹ

ಅಂಬೇಡ್ಕರ್ ಅವರ ವಾಸ್ತವ್ಯಕ್ಕೆ ಸಾಕ್ಷಿಯಾಗಿರುವ ಪಿಡಬ್ಲ್ಯುಡಿ ಐಬಿ ಕಟ್ಟಡ ಇಂದು ಶಿಥಿಲಾವಸ್ಥೆಯಲ್ಲಿದ್ದು, ಅದರ ಐತಿಹಾಸಿಕ ಮಹತ್ವದ ಬಗ್ಗೆ ಬಹುತೇಕ ಜನರಿಗೆ ಅರಿವಿಲ್ಲ. ಇಂತಹ ಮಹತ್ವದ ಸ್ಮರಣೀಯ ಸ್ಥಳನಿರ್ಲಕ್ಷ್ಯಕ್ಕೊಳಗಾಗಿರುವುದು ವಿಷಾದನೀಯ.

ಜಿಲ್ಲಾಡಳಿತ ಈ ಬಗ್ಗೆ ತಕ್ಷಣ ಗಮನಹರಿಸಿ, ಕಟ್ಟಡವನ್ನು ವೈಜ್ಞಾನಿಕವಾಗಿ ಸಂರಕ್ಷಿಸುವುದರ ಜೊತೆಗೆ ಅದರ ಐತಿಹಾಸಿಕ ಹಿನ್ನೆಲೆಯನ್ನು ದಾಖಲಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಪ್ರೇರಣೆಯ ಕೇಂದ್ರವಾಗಿ ರೂಪಿಸಲು ಮನವಿ

ಕಟ್ಟಡದ ಆವರಣದಲ್ಲಿ ಡಾ. ಅಂಬೇಡ್ಕರ್ ಅವರ ಬೃಹತ್ ಪ್ರತಿಮೆ ಸ್ಥಾಪಿಸಿ, ಅವರ ಜೀವನ, ಹೋರಾಟ, ಸಂವಿಧಾನ ರಚನೆ ಹಾಗೂ ಸಾಮಾಜಿಕ ನ್ಯಾಯದ ಚಿಂತನೆಗಳನ್ನು ಪರಿಚಯಿಸುವ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರನಿರ್ಮಿಸಬೇಕು.ಐತಿಹಾಸಿಕ ಕಟ್ಟಡವನ್ನು ಸುಂದರವಾಗಿ ಅಭಿವೃದ್ಧಿಪಡಿಸಿ, ವಿದ್ಯಾರ್ಥಿಗಳು, ಸಂಶೋಧಕರು, ಪ್ರವಾಸಿಗರು ಹಾಗೂ ಸಾರ್ವಜನಿಕರಿಗೆ ಜ್ಞಾನ ಮತ್ತು ಪ್ರೇರಣೆ ನೀಡುವ ಕೇಂದ್ರವನ್ನಾಗಿ ರೂಪಿಸಬೇಕು ಎಂದು ಸಮಿತಿ ಆಗ್ರಹಿಸಿದೆ.

ಅಂಬೇಡ್ಕರ್ ಅವರ ವಿಜಯಪುರ ಭೇಟಿಯು ಜಿಲ್ಲೆಯ ಇತಿಹಾಸದ ಮಹತ್ವದ ಅಧ್ಯಾಯವಾಗಿದ್ದು, ಅದನ್ನುಮುಂದಿನಪೀಳಿಗೆಗೆಉಳಿಸಿ ತಲುಪಿಸುವುದು ಜಿಲ್ಲಾಡಳಿತದ ಜವಾಬ್ದಾರಿಯಾಗಿದೆ. ಆದ್ದರಿಂದ ಈ ಸ್ಥಳವನ್ನು ಕೇವಲ ಕಟ್ಟಡವಾಗಿ ಪರಿಗಣಿಸದೆ, ಸಾಮಾಜಿಕ ಪರಿವರ್ತನೆಯ ಇತಿಹಾಸವನ್ನು ಸಾರುವ ಸ್ಮಾರಕವಾಗಿ ಅಭಿವೃದ್ಧಿಪಡಿಸಬೇಕು ಎಂದು ಸಮಿತಿ ಮನವಿ ಮಾಡಿದೆ. ಈ ಸಂದರ್ಭದಲ್ಲಿಪ್ರೇಮ್‌ಚಲವಾದಿ, ಆಕಾಶ ಹಿಪ್ಪರಗಿ, ಆಶಿಫ್ ಪಟೇಲ್ ಸೇರಿದಂತೆ ದಲಿತ ಸಂಘಟನೆಗಳ ಮುಖಂಡರು ಉಪಸ್ಥಿತರಿದ್ದರು.

ಮುದ್ದೇಬಿಹಾಳ ಬರಪೀಡಿತ ಪ್ರದೇಶ ಘೋಷಣೆ: ಕಾಂಗ್ರೆಸ್ ವಿಜಯೋತ್ಸವ



ಮುದ್ದೇಬಿಹಾಳ: ಮಳೆ ಕೊರತೆಯಿಂದ ರೈತರು ಸಂಕಷ್ಟ ಅನುಭವಿಸುತ್ತಿದ್ದ ಹಿನ್ನೆಲೆಯಲ್ಲಿ ಶಾಸಕ ಸಿ.ಎಸ್.ನಾಡಗೌಡ ಅವರು ಮುಖ್ಯಮಂತ್ರಿ ಅವರ ಮೇಲೆ ಒತ್ತಡ ಹೇರಿ ಮುದ್ದೇಬಿಹಾಳ ತಾಲ್ಲೂಕನ್ನು ಅಧಿಕೃತವಾಗಿ ಬರಪೀಡಿತ ಪಟ್ಟಿಗೆ ಸೇರಿಸುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಹೇಳಿದರು.

ತಾಲ್ಲೂಕು ಬರಪೀಡಿತ ಪಟ್ಟಿಗೆ ಸೇರ್ಪಡೆಯಾದ ಹಿನ್ನೆಲೆಯಲ್ಲಿ ಪಟ್ಟಣದ ಅಂಬೇಡ್ಕರ್?ಬಸವೇಶ್ವರ ವೃತ್ತದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಗುರುವಾರ ಪಟಾಕಿ ಸಿಡಿಸಿ ವಿಜಯೋತ್ಸವ ಆಚರಿಸಿದರು.

ಈ ವೇಳೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗುರಣ್ಣ ತಾರನಾಳ, ಮಹಿಬೂಬ ಗೊಳಸಂಗಿ, ಸಂಗನಗೌಡ ಬಿರಾದಾರ, ಪ್ರಭುರಾಜ ಕಲಬುರಗಿ, ಮುತ್ತಣ್ಣ ಕಡಿ, ಸಿಕಂದರ ಜಾನವೇಕರ, ಸಿ.ಪಿ.ಸಜ್ಜನ, ಬಾಪುಗೌಡ ಪೀರಾಪೂರ, ರಫೀಕ ಶಿರೋಳ, ರಾಮಣ್ಣ ರಾಜನಾಳ, ಗೋಪಿ ಮಡಿವಾಳರ, ಯಲ್ಲಪ್ಪ ನಾಯಕಮಕ್ಕಳ, ಸಂತೋಷ ನಾಯ್ಕೋಡಿ, ರಂಜಾನ ನದಾಫ, ಸಂಗು ನೇಬಗೇರಿ ಸೇರಿದಂತೆ ಮುಖಂಡರು ಹಾಗೂ ಕಾರ್ಯಕರ್ತರು ಇದ್ದರು.

ಹಳ್ಳಿ ಕ್ರೀಡೆಯ ಗತ್ತು, ಕಡ್ಲೇವಾಡದ ತಾಕತ್ತು! ಸ್ಪರ್ಧೆ ಉದ್ಘಾಟಿಸಿದ ಡಾ. ಪ್ರಭುಗೌಡ ಲಿಂಗದಳ್ಳಿ



ಹೂವಿನಹಿಪ್ಪರಗಿ: ಕಡ್ಲೇವಾಡ ಗ್ರಾಮದಲ್ಲಿ ಶ್ರೀ ಹನುಮಾನ್ ಜಾತ್ರಾ ಮಹೋತ್ಸವದ ಅಂಗವಾಗಿ ಏರ್ಪಡಿಸಿದ್ದ ಭಾರ ಎತ್ತುವ ಸ್ಪರ್ಧೆಯನ್ನು ಜನಪ್ರಿಯ ನಾಯಕರಾದ. ಕಾಂಗ್ರೆಸ್ ಪಕ್ಷದ ಕೆಪಿಸಿಸಿ ರಾಜ್ಯ ಪ್ರಧಾನ ಕಾರ್ಯದರ್ಶಿಗಳು ಮತ್ತು ಅನುಗ್ರಹ ಆಸ್ಪತ್ರೆಯ ಮುಖ್ಯಸ್ಥರು. ದೇವರ ಹಿಪ್ಪರಗಿ ಮತಕ್ಷೇತ್ರದ ಭವಿಷ್ಯದ ನಾಯಕರು ಮತ್ತು ಭಾವಿ ಶಾಸಕರು. ಡಾ.ಪ್ರಭುಗೌಡ ಲಿಂಗದಳ್ಳಿ ಚಬನೂರ ಅವರು ಉದ್ಘಾಟಿಸಿ ಚಾಲನೆ ನೀಡಿದರು ಈ ಸಂದರ್ಭದಲ್ಲಿ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು, ನಮ್ಮ ಗ್ರಾಮೀಣ ಭಾಗದ ಪಾರಂಪರಿಕ ಕ್ರೀಡೆಗಳು ಯುವಕರಲ್ಲಿ ಶಕ್ತಿ, ಧೈರ್ಯ, ಆತ್ಮವಿಶ್ವಾಸ ಹಾಗೂ ಸ್ಪರ್ಧಾ ಮನೋಭಾವ ಬೆಳೆಸುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ ಎಂದು ತಿಳಿಸಿದರು. ಜಾತ್ರೆ ಅಂದ್ರೆ ಬರೀ ದೇವರ ದರ್ಶನ ಅಲ್ಲ ಊರಿನ ಜನ ಒಂದಾಗಿ ಸೇರೋ ಸಂಭ್ರಮ, ನಮ್ಮ ಮಣ್ಣಿನ ಸಂಸ್ಕೃತಿ ಉಳಿಸೋ ಹಬ್ಬ,ಬಾರ ಎತ್ತುವ ಸ್ಪರ್ಧೆಯಲ್ಲಿ ಭಾಗವಹಿಸಿ 35 ಕೆಜಿ ಸಂಗ್ರಾಣಿಕಲ್ಲನ್ನು ಒಂದೇ ಕೈಯಿಂದ ಎತ್ತಿ. ಪ್ರದರ್ಶನ ತೋರಿಸಿದರು

ಶರಣರ ಸಂದೇಶ ಆಲಿಸುವುದು ಪುಣ್ಯದ ಕಾರ್ಯ: ಚನ್ನಮಲ್ಲ ಶ್ರೀ



ಆಲಮೇಲ: ಶರಣರ ಸಂದೇಶಗಳನ್ನು ಆಲಿಸುವುದು ಪುಣ್ಯದ ಕಾರ್ಯ. ಪ್ರತಿಯೊಬ್ಬರೂ ಹಿತವಾದ ಹಾಗೂ ಸೌಮ್ಯ ಮಾತುಗಳನ್ನು ಆಡಬೇಕು. ಶರಣ–ರ ತತ್ವ, ಆದರ್ಶ ಮತ್ತು ಸಂದೇಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಸನ್ಮಾರ್ಗದಲ್ಲಿ ನಡೆಯಬೇಕು ಎಂದು ಬಡದಾಳದ ಚನ್ನಮಲ್ಲ ಶಿವಯೋಗಿ ಶಿವಾಚಾರ್ಯರು ಹೇಳಿದರು. ತಾಲ್ಲೂಕಿನ ದೇವರನಾವದಗಿ ಗ್ರಾಮದ ಮಲ್ಲಿಕಾರ್ಜುನ ಹಾಗೂ ಸೋಮೇಶ್ವರ ಜಾತ್ರಾ ಮಹೋತ್ಸವ, ನೂತನ ಕಳಸಾರೋಹಣ ಮತ್ತು ಅಜಾತ ನಾಗಲಿಂಗರ ಪುರಾಣ ಮಂಗಲೋತ್ಸವದ ಅಂಗವಾಗಿ ನಡೆದ ಧರ್ಮಸಭೆಯಲ್ಲಿ ಮಾತನಾಡಿದರು.

ಸಾರ್ವಜನಿಕರು ಪರಸ್ಪರ ಸಂವಹನ ನಡೆಸುವಾಗ ಹಿತವಾದ ಹಾಗೂ ಸೌಮ್ಯ ಮಾತುಗಳನ್ನು ಬಳಸಬೇಕು. ಶರಣ–ರ ವಿಚಾರಧಾರೆ, ಉತ್ತಮ ನಡವಳಿಕೆ ಮತ್ತು ಸೌಹಾರ್ದಯುತ ಜೀವನವನ್ನು ರೂಢಿಸಿಕೊಳ್ಳಬೇಕು ಎಂದು ತಿಳಿಸಿದರು.

ಕನ್ನೊಳ್ಳಿಯ ಸಿದ್ದಲಿಂಗ ಶಿವಾಚಾರ್ಯರು, ನಿವೃತ್ತ ಶಿಕ್ಷಕ ಅಶೋಕ ಬಡಿಗೇರ, ಶಿಕ್ಷಕ ನಿಂಗಣ್ಣ ಬಿರಾದಾರ, ಭಾಗ್ಯವಂತಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಅಶೋಕ ಯರಗಲ, ಅಶೋಕ ಜಾಧವ, ಜಗದೀಶ ಗುಗ್ಗರಿ ಹಾಗೂ ನಿಂಗಣ್ಣ ಸಣ್ಣಕ್ಕಿ ಮಾತನಾಡಿದರು.

ಶಾಸಕ ಅಶೋಕ ಮನಗೂಳಿ ಅವರು ಮಂಗಲ ಕಾರ್ಯಾಲಯದ ಅಭಿವೃದ್ಧಿ ಕಾಮಗಾರಿಗಳಿಗೆ 25 ಲಕ್ಷ ಅನುದಾನ ನೀಡುವುದಾಗಿ ಘೋಷಿಸಿದರು. ಮಾಜಿ ಶಾಸಕ ರಮೇಶ ಭೂಸನೂರ ಅವರು ಸಂಸದರ ಅನುದಾನ ಕೊಡಿಸುವುದಾಗಿ ಭರವಸೆ ನೀಡಿದರು.

ಸಾರೋಟ ಮೆರವಣಿಗೆ, ಪುರವಂತರ ಪ್ರದರ್ಶನ, ಬಾಜಿ–ಬಜಂತ್ರಿ ಹಾಗೂ ದೇವರ ಪಲ್ಲಕ್ಕಿ ಮೆರವಣಿಗೆ ನಡೆಯಿತು. ಶಿಕ್ಷಕ ಚನ್ನು ನಾರಾಯಣಪುರ ನಿರೂಪಿಸಿದರು. ಮುತ್ತು ಗುಗ್ಗರಿ ವಂದಿಸಿದರು.

ಮಡಿವಾಳ ಗೋಗಿ, ಸತೀಶ ಕೋರಿ, ಡಾ. ಮಹಾಂತೇಶ ಹೀರೆಗೌಡರ, ಶ್ರೀಶೈಲ ಮಠಪತಿ ಸೇರಿದಂತೆ ಹಲವರನ್ನು ವಿಶೇಷವಾಗಿ ಸನ್ಮಾನಿಸಲಾಯಿತು. ಅಪಾರ ಸಂಖ್ಯೆಯ ಭಕ್ತರು ಪಾಲ್ಗೊಂಡಿದ್ದರು.

ಸಹಕಾರ ಕ್ಷೇತ್ರದ ಬೆಳವಣಿಗೆಗೆ ಜಿಲ್ಲಾ ಒಕ್ಕೂಟದ ನಿರಂತರ ಶ್ರಮ: ಎಂ.ಸಿ. ಮುಲ್ಲಾ



ವಿಜಯಪುರ: ಜಿಲ್ಲೆಯ ಸಹಕಾರ ಸಂಘಗಳು ಮತ್ತು ಬ್ಯಾಂಕ್‌ಗಳ ಅಭಿವೃದ್ಧಿಗೆ ಪೂರಕವಾಗಿ ಜಿಲ್ಲಾ ಸಹಕಾರ ಯೂನಿಯನ್ ನಿರಂತರವಾಗಿ ವಿವಿಧ ತರಬೇತಿ ಹಾಗೂ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದೆ ಎಂದು ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷ ಎಂ.ಸಿ. ಮುಲ್ಲಾ ಹೇಳಿದರು.

ನಗರದಲ್ಲಿ ಜಿಲ್ಲಾ ಸಹಕಾರ ಯೂನಿಯನ್ ವತಿಯಿಂದ 2025–26ನೇ ಸಾಲಿನ 89ನೇ ವಾರ್ಷಿಕ ಮಹಾಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾ ಸಹಕಾರ ಕ್ಷೇತ್ರದ ಬೆಳವಣಿಗೆಗೆ

ಸಹಕಾರ ಸಂಘಗಳು ಹಾಗೂ ಬ್ಯಾಂಕ್‌ಗಳ ಸಹಭಾಗಿತ್ವ ಅತ್ಯಂತ ಮಹತ್ವದ್ದಾಗಿದೆ. ಸಹಕಾರ ಕ್ಷೇತ್ರದ ಚಟುವಟಿಕೆಗಳನ್ನು ಜಿಲ್ಲೆಯ ಕಟ್ಟಕಡೆಯ ವ್ಯಕ್ತಿಗೂ ತಲುಪಿಸುವ ನಿಟ್ಟಿನಲ್ಲಿ ಯೂನಿಯನ್ ಕಾರ್ಯನಿರ್ವಹಿಸುತ್ತಿದೆ.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಹಾಗೂ ಸಹಕಾರ ಇಲಾಖೆಯ ಮಾರ್ಗದರ್ಶನದಲ್ಲಿ ಜಿಲ್ಲಾ ಮತ್ತು ರಾಜ್ಯಮಟ್ಟದ ವಿಶೇಷ ಕಾರ್ಯಕ್ರಮಗಳು, ಮಹಿಳಾ ತರಬೇತಿ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ತರಬೇತಿ, ಯುವಜನ ತರಬೇತಿ, ಪ್ರಬಂಧ ಸ್ಪರ್ಧೆ ಹಾಗೂ ಸಹಕಾರ ಸಪ್ತಾಹ ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ನಿರಂತರವಾಗಿ ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಜಿಲ್ಲೆಯ ಎಲ್ಲ ಸಹಕಾರಿಗಳು ಮತ್ತು ಸಹಕಾರ ಸಂಘಗಳ ಪದಾಧಿಕಾರಿಗಳ ಸಹಕಾರದಿಂದ ಈ ಕಾರ್ಯಕ್ರಮಗಳು ಯಶಸ್ವಿಯಾಗುತ್ತಿವೆ. ಇದಕ್ಕಾಗಿ ಜಿಲ್ಲಾ ಸಹಕಾರ ಯೂನಿಯನ್ ಆಡಳಿತ ಮಂಡಳಿಯ ಪರವಾಗಿ ಎಲ್ಲರಿಗೂ ಕೃತಜ್ಞತೆ ಸಲ್ಲಿಸುವುದಾಗಿ ಹೇಳಿದರು.

ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ಉಪಾಧ್ಯಕ್ಷ ರಾಜಶೇಖರ ಗುಡದಿನ್ನಿ ಮಾತನಾಡಿ, ಜಿಲ್ಲಾ ಸಹಕಾರ ಯೂನಿಯನ್‌ನಲ್ಲಿ ನಿರಂತರವಾಗಿ ತರಬೇತಿ ಕಾರ್ಯಕ್ರಮಗಳು ಯಶಸ್ವಿಯಾಗಿ ನಡೆಯುತ್ತಿದ್ದು, ಎಲ್ಲ ಕಾರ್ಯಕ್ರಮಗಳಿಗೂ ಸಹಕಾರಿಗಳನ್ನು ಆಹ್ವಾನಿಸುತ್ತಿರುವುದು ಸಹಕಾರ ಕ್ಷೇತ್ರದ ಪ್ರಗತಿಯ ಸಂಕೇತವಾಗಿದೆ ಎಂದರು.

ನಿರ್ದೇಶಕಿ ಸಂಯುಕ್ತಾ ಎಸ್. ಪಾಟೀಲ ಅವರು ಸಸಿಗೆ ನೀರೆರೆಯುವ ಮೂಲಕ ಸಭೆಗೆ ಚಾಲನೆ ನೀಡಿ ಮಾತನಾಡಿ, ಹಿರಿಯ ಸಹಕಾರಿಗಳ ಸಹಕಾರದಿಂದ ಜಿಲ್ಲೆಯಲ್ಲಿ ಸಹಕಾರ ಚಳವಳಿ ವ್ಯಾಪಕವಾಗಿ ಬೆಳೆಯುತ್ತಿದೆ. ಸಹಕಾರ ಕ್ಷೇತ್ರದ ಪ್ರಯೋಜನಗಳು ಕಟ್ಟಕಡೆಯ ವ್ಯಕ್ತಿಗೂ ತಲುಪುತ್ತಿರುವುದು ಸಂತಸದ ಸಂಗತಿ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯಸಹಕಾರಮಹಾಮಂಡಳದ ನಿರ್ದೇಶಕ ಕೆ.ಬಿ. ಪಾಟೀಲ, ಜಿಲ್ಲಾ ಸಹಕಾರ ಯೂನಿಯನ್ ಉಪಾಧ್ಯಕ್ಷ ಎನ್.ಎಸ್. ಅಮರಗೊಂಡ, ನಿರ್ದೇಶಕರಾದ ಎಸ್.ಎಸ್. ತಳೇವಾಡ, ಶ್ರೀಹರ್ಷ ಪಾಟೀಲ, ಎಸ್.ಜೆ. ಇಂದಿ, ವಿ.ಬಿ. ಪಾಟೀಲ, ಸಿ.ಎಸ್. ಪಾಟೀಲ, ಬಿ.ಎಂ. ಕುಂಬಾರ, ಬಿ.ಎಸ್. ಹುಡೇದ, ಸಿ.ಎಸ್. ಮಳ್ಳದ, ಸುರೇಶಗೌಡ ಬಿರಾದಾರ, ಎಸ್.ಎಸ್. ವಾರದ, ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಕೆ.ಎನ್. ಪಾರಗೊಂಡ, ಜಿಲ್ಲಾ ಸಹಕಾರ ಶಿಕ್ಷಕ ಪೀರಪ್ಪ ಎಸ್. ಕಣಮೇಶ್ವರ, ದ್ವಿತೀಯ ದರ್ಜೆ ಸಹಾಯಕ ಎಸ್.ಎನ್. ಕುಲಕರ್ಣಿ ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

ಇಂಡಿ ತಾಲೂಕಿನ ಕೆರೆಗಳಿಗೆ ನೀರು ತುಂಬಿಸಲು ರೈತರ ಆಗ್ರಹ



ವಿಜಯಪುರ: ತೀವ್ರ ಬರದ ಸಂಕಷ್ಟ ಎದುರಿಸುತ್ತಿರುವ ಇಂದಿ ತಾಲೂಕಿನ ಕೆರೆಗಳಿಗೆ ತಕ್ಷಣ ನೀರು ತುಂಬಿಸುವುದು ಹಾಗೂ ರೈತರಿಗೆ ಸಮರ್ಪಕ ವಿದ್ಯುತ್ ಪೂರೈಕೆ ಕಲ್ಪಿಸುವಂತೆ ಆಗ್ರಹಿಸಿ ಭಾರತೀಯ ಕಿಸಾನ್ ಸಂಘದ ಕರ್ನಾಟಕ ಉತ್ತರ ಪ್ರಾಂತ, ವಿಜಯಪುರ ಜಿಲ್ಲಾ ಘಟಕವು ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರಿಗೆ ಮನವಿ ಸಲ್ಲಿಸಿದೆ. ೦ಂಡಿ ತಾಲೂಕಿನ ಕೆರೆಗಳಿಗೆ ಪೈಪ್‌ಗಳ ಮೂಲಕ ನೀರು ತುಂಬಿಸುವ ಯೋಜನೆ ಇದ್ದರೂ, ಇದುವರೆಗೆ ಯಾವುದೇ ಕೆರೆಗಳಿಗೆ ನೀರು ಹರಿಸಿಲ್ಲ. ಇದರಿಂದ ಬರಗಾಲದ ನಡುವೆ ರೈತರು ಮತ್ತಷ್ಟು ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಸಂಘದ ಕರ್ನಾಟಕ ಉತ್ತರ ಪ್ರಾಂತ ಉಪಾಧ್ಯಕ್ಷ ಮಲ್ಲನಗೌಡ ಪಾಟೀಲ ಅಸಮಾಧಾನ ವ್ಯಕ್ತಪಡಿಸಿದರು. ಕೆರೆಗಳಿಗೆ ನೀರು ತುಂಬಿಸುವ ಯೋಜನೆಯನ್ನು ಕಾಗದಕ್ಕೆ ಸೀಮಿತಗೊಳಿಸದೆ, ಕೂಡಲೇ ಕಾರ್ಯಗತಗೊಳಿಸಬೇಕು. ರೈತರ ಹಿತದೃಷ್ಟಿಯಿಂದ ವಿಳಂಬ ಮಾಡದೆ ಕೆರೆಗಳಿಗೆ ನೀರು ಹರಿಸುವುದರ ಜೊತೆಗೆ ಸಮರ್ಪಕ ವಿದ್ಯುತ್ ಪೂರೈಕೆಗೂ ಅಧಿಕಾರಿಗಳು ಆದ್ಯತೆ ನೀಡಬೇಕು ಎಂದು ಒತ್ತಾಯಿಸಿದರು.

ರೈತರ ತಾಳ್ಮೆಯನ್ನು ಪರೀಕ್ಷಿಸಬೇಡಿ:

ಕೆರೆಗಳಿಗೆ ನೀರು ತುಂಬಿಸುವ ಕಾರ್ಯ–ಕ್ಕೆ ತಕ್ಷಣ ಚಾಲನೆ ನೀಡದಿದ್ದರೆ, ಮುಂದಿನ ದಿನಗಳಲ್ಲಿ ರೈತರೆಲ್ಲರೂ ಜಿಲ್ಲಾಧಿಕಾರಿ ಕಚೇರಿ ಎದುರು ಧರಣಿ ಸತ್ಯಾಗ್ರಹ ನಡೆಸಬೇಕಾಗುತ್ತದೆ ಎಂದು ಮಲ್ಲನಗೌಡ ಪಾಟೀಲ ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ರಾಜ್ಯ ಕಾರ್ಯಕಾರಿಣಿ ಸದಸ್ಯ ಗುರುನಾಥ ಬಗಲಿ, ಈರಪ್ಪ ಮಲ್ಲಪ್ಪ ಕೊಟ್ಯಾಳ, ತಾಲೂಕು ಅಧ್ಯಕ್ಷ ಶರಣಪ್ಪ ತಾಜಪುರ, ಶಂಕ್ರಪ್ಪ ರೋಗಿ, ಗೋಪಾಲ ತಾರಾಪುರ, ಸಂಗಪ್ಪ ಕುಂಬಾರ, ಶರಣಪ್ಪ ತಾರಾಪುರ, ಸಿದ್ದರಾಯ ತೆಲಿ, ಶ್ರೀಶೈಲ, ಸುಧಾಮ, ನಾಗೇಂದ್ರ, ಪ್ರಕಾಶ, ಸಿದ್ದರಾಯ, ಜಗದೀಶ ಕೆಂಗನಾಳ, ಮಲ್ಲಪ್ಪ ಸುಧಾಮ ಸೇರಿದಂತೆ ಸಂಘದ ಪದಾಧಿಕಾರಿಗಳು ಹಾಗೂ ರೈತರು ಉಪಸ್ಥಿತರಿದ್ದರು.

ತಾಲೂಕು ಮಟ್ಟಕ್ಕೆ ಕ್ರೀಡಾಪಟುಗಳು ಆಯ್ಕೆ



ಮುದ್ದೇಬಿಹಾಳ: ಇತ್ತೀಚೆಗೆ ಜ್ಞಾನ ಭಾರತಿ ಶಾಲಾ ಮೈದಾನದಲ್ಲಿ ಆಯೋಜಿಸಲಾಗಿದ್ದ ಹೋಬಳಿ ಮಟ್ಟದ ಕ್ರೀಡಾಕೂಟದಲ್ಲಿ ಮುದ್ದೇಬಿಹಾಳದ ಚಿನ್ಮಯ ಜಿ.ಸಿ. ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ಅತ್ಯುತ್ತಮ ಸಾಧನೆ ಮಾಡುವ ಮೂಲಕ ತಾಲೂಕು ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಬಾಲಕರ ವಿಭಾಗದಲ್ಲಿ ಶಾಲೆಯ ವಾಲಿಬಾಲ್ ತಂಡವು ಪ್ರಥಮ ಸ್ಥಾನ ಗಳಿಸಿ ತಾಲೂಕು ಮಟ್ಟಕ್ಕೆ ಅರ್ಹತೆ ಪಡೆದುಕೊಂಡಿದೆ. ಅಲ್ಲದೆ ವೈಯಕ್ತಿಕ ಸ್ಪರ್ಧೆಗಳಲ್ಲಿ ಕುಮಾರ ಅಮರವಿಜಯ ಸಾಲಿಮಠ(ಗುಂಡು ಎಸೆತ ಮತ್ತು ಚಕ್ರ ಎಸೆತ) ಎರಡರಲ್ಲೂ ಪ್ರಥಮ ಸ್ಥಾನ ಪಡೆದಿದ್ದಾನೆ.


ಬಾಲಕಿಯರ ವಿಭಾಗದಲ್ಲಿ ಕುಮಾರಿ ತನಿಷ್ಕಾ ರಾಜಪುರೋಹಿತ 100 ಮೀಟರ್ ಓಟದಲ್ಲಿ ಪ್ರಥಮ ಸ್ಥಾನ, ಕುಮಾರಿ ಅಂಜಲಿ ಶ್ರೀನಿವಾಸ ಚವ್ಹಾಣ 200 ಮೀಟರ್ ಓಟದಲ್ಲಿ ಪ್ರಥಮ ಸ್ಥಾನ ಹಾಗೂ ಕುಮಾರಿ ಸಿಂಚನಾ ಚಲವಾದಿ ಉದ್ದ ಜಿಗಿತದಲ್ಲಿ ದ್ವಿತೀಯ ಸ್ಥಾನ ಪಡೆದು ತಾಲೂಕು ಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ. ಅಲ್ಲದೇ ಬಾಲಕಿಯರ ಥ್ರೋಬಾಲ್ ತಂಡವು ದ್ವಿತೀಯ ಸ್ಥಾನ ಗಳಿಸಿ ಸಾಧನೆ ಮಾಡಿದೆ.

ವಿಜೇತ ವಿದ್ಯಾರ್ಥಿಗಳ ಈ ಅತ್ಯುತ್ತಮ ಸಾಧನೆಗೆ ಶಾಲೆಯ ಅಧ್ಯಕ್ಷರಾದ ಶ್ರೀ ಪಾರಸ ಪೂ ರವಾಲ, ಕಾರ್ಯದರ್ಶಿ ಶ್ರೀ ಮುರಳಿಕೃಷ್ಣ ಬುಡ್ಡೋಡಿ, ಶಾಲೆಯ ಎಲ್ಲಾ ನಿರ್ದೇಶಕರು, ಹಿರಿಯಪ್ರಾಥಮಿಕವಿಭಾಗದ ಮುಖ್ಯೋಪಾಧ್ಯಾಯಿನಿಯರಾದ ಸಿಸ್ಟರ್ ಸ್ಟೆಲಾ ಡಿಸೋಜಾ, ಪ್ರೌಢ ವಿಭಾಗದ ಮುಖ್ಯೋಪಾಧ್ಯಾಯ ಶ್ರೀ ಆನಂದ ಓಗಿ ಹಾಗೂ ದೈಹಿಕ ಶಿಕ್ಷಕರಾದ ಬಸವರಾಜ ರಾಮವಾಡಗಿ ಅವರು ಹರ್ಷ ವ್ಯಕ್ತಪಡಿಸಿದ್ದಾರಲ್ಲದೇ ವಿಜೇತ ವಿದ್ಯಾರ್ಥಿಗಳಿಗೆ ಶುಭ ಹಾರೈಸಿದ್ದಾರೆ.

PUBLIC FAST KANNADA DAILY NEWS PAPER

ದಿನಾಂಕ : 22–09–2026

ಸರ್ಕಾರ ರೈತರ ಬೆನ್ನೆಲುಬು ಮುರಿಯಲು ಮುಂದಾಗಬಾರದು: ದೊಡ್ಡನಗೌಡ ಪಾಟೀಲ



ಕುಷ್ಟಗಿ:'ಕಲ್ಯಾಣ ಕರ್ನಾಟಕ ಪ್ರದೇಶದ ಈ ತಾಲ್ಲೂಕು ಒಂದೆಡೆ ಎಲ್ಲ ರೀತಿಯಿಂದಲೂ ಹಿಂದುಳಿದಿದ್ದರೆ ಪದೇ ಪದೇ ವರುಣನ ಅವಕೃಪೆಯಿಂದ ಜನ ಮತ್ತಷ್ಟೂ ಹೈರಾಣಾಗುವಂತಾಗಿದೆ. ಇಂಥ ಸೂಕ್ಷ್ಮ ಪರಿಸ್ಥಿತಿಯಲ್ಲಿ ತಾಳ್ಮೆ ಪರೀಕ್ಷಿಸಬಾರದು ಮತ್ತು ಸರ್ಕಾರ ರೈತರ ಬೆನ್ನೆಲುಬು ಮುರಿಯಲು ಮುಂದಾಗಬಾರದು' ಎಂದು ವಿಧಾನಸಭೆ ಪ್ರತಿಪಕ್ಷದ ಮುಖ್ಯಸಚೇತಕ ದೊಡ್ಡನಗೌಡ ಪಾಟೀಲ ಹೇಳಿದರು.

ಇಲ್ಲಿಯ ಕ್ರೀಡಾಂಗಣದಲ್ಲಿ ನಡೆದ ಕಲ್ಯಾಣ ಕರ್ನಾಟಕ ಉತ್ಸವದಲ್ಲಿ ಮಾತನಾಡಿದ ಅವರು, 'ತಾಲ್ಲೂಕಿನ ಸಂಕಷ್ಟದ ಸ್ಥಿತಿ ಅರ್ಥಮಾಡಿಕೊಂಡು 3ನೇ ಹಂತದಲ್ಲಾದರೂ ಬರ ಪೀಡಿತ ಪಟ್ಟಿಯಲ್ಲಿ ಸೇರಿಸುವ ಮೂಲಕ ರೈತರ ನೆರವಿಗೆ ಬರಬೇಕು' ಎಂದು ಸರ್ಕಾರಕ್ಕೆ ಪುನಃ ಒತ್ತಾಯಿಸಿದರು.

ಹೈದರಾಬಾದ ಪ್ರಾಂತ್ಯದ ವಿಮೋಚನೆಗಾಗಿ ಈ ಭಾಗದಲ್ಲಿ ಬಹಳಷ್ಟು ರೀತಿಯಲ್ಲಿ ಹೋರಾಟ ನಡೆಸಿದ ಮತ್ತು ಅನೇಕ ಸ್ವಾತಂತ್ರ್ಯ ಸೇನಾನಿಗಳ ತ್ಯಾಗ, ಬಲಿದಾನ ನಡೆದಿದೆ'ಎಂದರು.

ರಾಷ್ಟ್ರ ಧ್ವಜಾರೋಹಣ ನೆರವೇರಿಸಿದ ತಹಶೀಲ್ದಾರ್ ಅಶೋಕ ಶಿಗ್ಗಾಂವಿ. ತಾ.ಪಂ ಇಒ ಅಮರೇಶ ಯಾದವ್ ಮಾತನಾಡಿದರು.

ಗ್ರೇಡ್–2 ತಹಶೀಲ್ದಾರ್ ರಜನೀಕಾಂತ ಕೆಂಗಾರಿ, ಸರ್ಕಲ್ ಇನ್ಸ್‌ಪೆಕ್ಟರ್ ವಿಶ್ವನಾಥ ಹಿರೇಗೌಡರ, ಪ್ರಭಾರ ಬಿಇಒ ಯಮನಪ್ಪ ಚೂರಿ, ಪುರಸಭೆ ಮುಖ್ಯಾಧಿಕಾರಿ ವೆಂಕಪ್ಪ ಬೀಳಗಿ, ಸಮಾಜ ಕಲ್ಯಾಣ ಅಧಿಕಾರಿ ತುಗ್ಲೆಪ್ಪ ದೇಸಾಯಿ, ಸಿಡಿಪಿಒ ಯಲ್ಲಮ್ಮ ಹಂಡಿ, ಪಿಎಸ್ಐ ಆನಂದ ನಾಯಕ, ರೈತ ಮುಖಂಡ ನಜೀರಸಾಬ್ ಮೂಲಿಮನಿ, ಸಿಬ್ಬಂದಿ ಇದ್ದರು.

ವಿವಿಧ ಶಾಲೆಗಳ ವಿದ್ಯಾರ್ಥಿಗಳಿಂದ ನಡೆದ ಸಾಂಸ್ಕೃತಿಕ ಕಾರ್ಯಕ್ರಮ ಆಕರ್ಷಕವಾಗಿತ್ತು. ಶರಣಪ್ಪ ಹುಡೇದ ಸ್ವಾಗತಿಸಿದರು. ಶಿಕ್ಷಕ ಶರಣಪ್ಪ ಉಪ್ಪಾರ ನಿರೂಪಿಸಿದರು.

ಶಾಸಕರ ಸರ್ಕಾರಿ ಕಚೇರಿಯಲ್ಲಿ ಶಾಸಕ ದೊಡ್ಡನಗೌಡ ಪಾಟೀಲ, ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ ಕಾರ್ಯ ನಿರ್ವಹಣಾಧಿಕಾರಿ ಅಮರೇಶ ಯಾದವ, ಪುರಸಭೆಯಲ್ಲಿ ಮುಖ್ಯಾಧಿಕಾರಿ ವೆಂಕಪ್ಪ ಬೀಳಗಿ, ಪೊಲೀಸ್ ಠಾಣೆಯಲ್ಲಿ ಸಿಪಿಐ ವಿಶ್ವನಾಥ ಹಿರೇಗೌಡರ ರಾಷ್ಟ್ರಧ್ವಜಾರೋಹಣ ನೆರವೇರಿಸಿದರು.

371ಜೆ ಪರಿಣಾಮಕಾರಿ ಜಾರಿ ಮೂಲಕ ಕಲ್ಯಾಣ ಕರ್ನಾಟಕದ ಸಮಗ್ರ ಅಭಿವೃದ್ಧಿಗೆ ಆದ್ಯತೆ ನೀಡಿ: ಹನುಮನಗೌಡ

ಯಲಬುರ್ಗಾ: ಕಲ್ಯಾಣ ಕರ್ನಾಟಕದ ಸಮಗ್ರ ಅಭಿವೃದ್ಧಿಗೆ ಸಂವಿಧಾನದ 371ಜೆ ಅಡಿಯಲ್ಲಿ ದೊರೆತಿರುವ ವಿಶೇಷ ಸ್ಥಾನಮಾನದ ಸಮರ್ಪಕ ಜಾರಿ ಸೇರಿದಂತೆ ಶಿಕ್ಷಣ, ಉದ್ಯೋಗ, ಆರೋಗ್ಯ, ಪೌಷ್ಟಿಕತೆ ಹಾಗೂ ಮೂಲಸೌಕರ್ಯ ಕ್ಷೇತ್ರಗಳಿಗೆ ಸರ್ಕಾರ ಆದ್ಯತೆ ನೀಡಬೇಕು ಎಂದು ಯಲಬುರ್ಗಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಇತಿಹಾಸ ಉಪನ್ಯಾಸಕ ಹನುಮನಗೌಡ ಆಗ್ರಹಿಸಿದರು.

ಪಟ್ಟಣದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ತಾಲೂಕು ಕ್ರೀಡಾಂಗಣದಲ್ಲಿ ತಾಲೂಕು ಆಡಳಿತ, ತಾಲೂಕು ಪಂಚಾಯಿತಿ ಹಾಗೂ ಪಟ್ಟಣ ಪಂಚಾಯಿತಿ ವತಿಯಿಂದ ಆಯೋಜಿಸಿದ್ದ 79ನೇ ಕಲ್ಯಾಣ ಕರ್ನಾಟಕ ಉತ್ಸವದಲ್ಲಿ ಅವರು ವಿಶೇಷ ಉಪನ್ಯಾಸ ನೀಡಿದರು.

ಕಲ್ಯಾಣ ಕರ್ನಾಟಕ ಪ್ರದೇಶವು ಎಂಟು ದಶಕಗಳ ಹಿಂದೆ ನಿಜಾಮರ ಆಳ್ವಿಕೆಗೆ ಒಳಪಟ್ಟಿತ್ತು. ಆ ಸಂದರ್ಭದಲ್ಲಿ ಆರ್ಥಿಕ, ಶೈಕ್ಷಣಿಕ ಹಾಗೂ ಸಾಮಾಜಿಕವಾಗಿ ಹಿಂದುಳಿದಿದ್ದ ಈ ಭಾಗ ನಿಜಾಮರ ವಿರುದ್ಧ ನಡೆದವಿಮೋಚನಾಹೋರಾಟದಫಲವಾಗಿ ಭಾರತದ ಒಕ್ಕೂಟದಲ್ಲಿ ವಿಲೀನಗೊಂಡಿತು ಎಂದು ಅವರು ವಿವರಿಸಿದರು.



ವಿಮೋಚನಾ ಹೋರಾಟದಲ್ಲಿ ಸರ್ದಾರ್ ವಲ್ಲಭಭಾಯಿ ಪಟೇಲ್, ಡಾ. ಬಿ.ಆರ್. ಅಂಬೇಡ್ಕರ್, ಹೈದರಾಬಾದ್‌ನ ಏಜೆ–ಂಟ್ ಜನರಲ್ ಆಗಿದ್ದ ಕೆ.ಎಂ. ಮುನ್ಷಿ ಅವರೊಂದಿಗೆ ಸ್ವಾಮಿ ರಮಾನಂದ ತೀರ್ಥ, ಯಲಬುರ್ಗಾದ ಪ್ರಭುರಾಜ ಪಾಟೀಲ, ಶಂಕರಣ್ಣ ಯರಾಸಿ, ಅಳವಂಡಿಯ ಶಿವಮೂರ್ತಿ ಸ್ವಾಮಿ, ಕುಷ್ಟಗಿಯ ಪುಂಡಲಿಕಪ್ಪ, ಈಶ್ವರಪ್ಪ, ಜ್ಞಾನಮೋಟಿ ಸೇರಿದಂತೆ ಹಲವು ಸ್ಥಳೀಯ ಹೋರಾಟಗಾರರು ಮಹತ್ವದ ಪಾತ್ರ ವಹಿಸಿದ್ದಾರೆ. ಅವರ ತ್ಯಾಗ ಮತ್ತು ಹೋರಾಟವನ್ನು ಸ್ಮರಿಸುವುದು ಅಗತ್ಯ ಎಂದರು.

ವಿಮೋಚನೆಯ ಬಳಿಕವೂ ಶೈಕ್ಷಣಿಕ ಹಾಗೂ ಔದ್ಯೋಗಿಕ ಹಿಂದುಳಿದಿರುವಿಕೆ ಮುಂದುವರಿದ ಹಿನ್ನೆಲೆಯಲ್ಲಿ ನಡೆದ ನಿರಂತರ ಹೋರಾಟದ ಫಲವಾಗಿ 371ಜೆ ವಿಶೇಷ ಸ್ಥಾನಮಾನ ದೊರೆತಿದೆ. ಇದರ ಆಶಯ ಈಡೇರಬೇಕಾದರೆ ಶಿಕ್ಷಣ ಮತ್ತು ಉದ್ಯೋಗ ಕ್ಷೇತ್ರದಲ್ಲಿ ಸೌಲಭ್ಯಗಳ ಪರಿಣಾಮಕಾರಿ ಅನುಷ್ಠಾನವಾಗಬೇಕು. ಅರ್ಹರಿಗೆ ಅದರ ಸಂಪೂರ್ಣ ಪ್ರಯೋಜನ ದೊರೆಯುವಂತೆ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಕಲ್ಯಾಣ ಕರ್ನಾಟಕದ ಅಭಿವೃದ್ಧಿಯನ್ನು ಕೇವಲ ಅನುದಾನಕ್ಕೆ ಸೀಮಿತಗೊಳಿಸದೆ, ಇಲ್ಲಿನ ನಿರ್ದಿಷ್ಟ ಸಮಸ್ಯೆಗಳನ್ನು ಗುರುತಿಸಿ ದೀರ್ಘಕಾಲೀನ ಯೋಜನೆ ರೂಪಿಸುವ ಅಗತ್ಯವಿದೆ. ವಿಶೇಷವಾಗಿ ಮಹಿಳೆಯರು, ಮಕ್ಕಳು ಹಾಗೂ ಗ್ರಾಮೀಣ ಜನರ ಆರೋಗ್ಯ ಮತ್ತು ಪೌಷ್ಟಿಕತೆಗೆ ಆದ್ಯತೆ ನೀಡಬೇಕು ಎಂದು ತಿಳಿಸಿದರು.

ಪ್ರತಿ ವರ್ಷ ಈ ಭಾಗದ ಹೆಣ್ಣುಮಕ್ಕಳು ಹಾಗೂ ಗರ್ಭಿಣಿಯರ ಪೌಷ್ಟಿಕಾಂಶದ ಮಟ್ಟವನ್ನುವೈಜ್ಞಾನಿಕವಾಗಿಮೌಲ್ಯಮಾಪನ ಮಾಡಿ ಗಣತಿ ನಡೆಸಬೇಕು. ವರದಿಯ ಆಧಾರದಲ್ಲಿ ಪೌಷ್ಟಿಕಾಂಶ ಕೊರತೆ ಇರುವ ಪ್ರದೇಶಗಳಿಗೆ ವಿಶೇಷ ಕಾರ್ಯಕ್ರಮ ರೂಪಿಸಬೇಕು ಎಂದು ಸಲಹೆ ನೀಡಿದರು.

ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಅನುಕೂಲವಾಗುವಂತೆ 247 ಗ್ರಂಥಾಲಯಗಳನ್ನು ಸ್ಥಾಪಿಸಬೇಕು. ಯುವಕರ ಕ್ರೀಡಾ ಪ್ರತಿಭೆ ಬೆಳೆಸಲು ಸುಸಜ್ಜಿತ ಕ್ರೀಡಾಂಗಣಗಳನ್ನು ನಿರ್ಮಿಸಬೇಕು. ಗ್ರಾಮೀಣ ಆರೋಗ್ಯ ಸೇವೆ ಬಲಪಡಿಸಲು ಪ್ರಾಥಮಿಕ ಆರೋಗ್ಯ ಕೇಂದ್ರಗಳು (PHC) ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳನ್ನು (CHC) ಅತ್ಯಾಧುನಿಕ ಸೌಲಭ್ಯ ಮತ್ತು ಅಗತ್ಯ ಸಿಬ್ಬಂದಿಯೊಂದಿಗೆ ಅಭಿವೃದ್ಧಿಪಡಿಸಬೇಕು ಎಂದು ಒತ್ತಾಯಿಸಿದರು.

ಕಲ್ಯಾಣ ಕರ್ನಾಟಕದ ಸಮಸ್ಯೆಗಳ ಕುರಿತು ರಾಜ್ಯ ಹಾಗೂ ಕೇಂದ್ರ ಸರ್ಕಾರಗಳ ಗಮನ ಸೆಳೆಯಲು ವಿಶೇಷ ಅಧಿವೇಶನಗಳನ್ನು ನಡೆಸಬೇಕು.

ಭಾರತ ಸರ್ಕಾರ ವರ್ಷಕ್ಕೊಮ್ಮೆ ಹಾಗೂ ರಾಜ್ಯ ಸರ್ಕಾರ ವರ್ಷಕ್ಕೆ ಎರಡು ಬಾರಿ, ಕನಿಷ್ಠ ಐದು ದಿನಗಳ ಕಾಲ ವಿಶೇಷ ಅಧಿವೇಶನ ನಡೆಸಬೇಕು. ಈ ಮೂಲಕ ಶಿಕ್ಷಣ, ಉದ್ಯೋಗ, ಆರೋಗ್ಯ, ಅನುದಾನ ಹಾಗೂ ಅಭಿವೃದ್ಧಿ ಯೋಜನೆಗಳ ಕುರಿತು ಸಮಗ್ರ ಚರ್ಚೆಗೆ ಅವಕಾಶ ಕಲ್ಪಿಸಬೇಕು ಎಂದು ಹೇಳಿದರು.

ರಾಜ್ಯ ಸರ್ಕಾರದ ಮಾದರಿಯಲ್ಲಿ ಕೇಂದ್ರ ಸರ್ಕಾರವೂ ಪ್ರತಿವರ್ಷ ಈ ಭಾಗಕ್ಕೆ ವಿಶೇಷ ಅನುದಾನ ನೀಡಬೇಕು. ಕೇಂದ್ರ ಸರ್ಕಾರದ ವಿವಿಧ ಅರ್ಹತಾ ಹಾಗೂ ಔದ್ಯೋಗಿಕ ಪರೀಕ್ಷೆಗಳಲ್ಲಿ 371ಜೆ ಸ್ಥಾನಮಾನದ ಸೌಲಭ್ಯವನ್ನು ಸೂಕ್ತವಾಗಿ ಪರಿಗಣಿಸುವಂತೆ ಕ್ರಮ ಕೈಗೊಳ್ಳಬೇಕು ಎಂದು ಹಕ್ಕೊತ್ತಾಯ ಮಂಡಿಸಲಾಯಿತು.

ಕಾರ್ಯಕ್ರಮದಲ್ಲಿ ತಾಲೂಕು ದಂಡಾಧಿಕಾರಿ ಹಾಗೂ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ ಸಮಿತಿ ಅಧ್ಯಕ್ಷ ಪ್ರಕಾಶ ಎಂ. ನಾಶಿ ಧ್ವಜಾರೋಹಣ ನೆರವೇರಿಸಿದರು. ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಶ್ರೀಮತಿ ನೀಲಗಂಗಾ ಬಬಲಾದಿ, ಆರಕ್ಷಕ ವೃತ್ತ ನಿರೀಕ್ಷಕ ಮೌನೇಶ ಬನಿಗೋಳ, ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಬಿ. ನಾಗೇಶ, ಕ್ಷೇತ್ರ ಶಿಕ್ಷಣಾಧಿಕಾರಿ ಶ್ರೀನಿವಾಸ ಬನಿಗೋಳ ವೇದಿಕೆಯಲ್ಲಿದ್ದರು.

ಚಿಕ್ಕಬನಿಗೋಳ ತಾಂಡಾದ ಸಹಶಿಕ್ಷಕ ಮಹೇಬೂಬ ಬಾದಷಾಹ ಕಾರ್ಯಕ್ರಮ ನಿರೂಪಿಸಿದರು. ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ, ಶಿಕ್ಷಕರು, ವಿವಿಧ ಶಾಲೆಗಳ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ವಿಮೋಚನಾ ಹೋರಾಟದ ಇತಿಹಾಸವನ್ನು ಸ್ಮರಿಸುವುದರ ಜತೆಗೆ 371ಜೆ ಪರಿಣಾಮಕಾರಿ ಜಾರಿ ಹಾಗೂ ಶಿಕ್ಷಣ, ಉದ್ಯೋಗ, ಆರೋಗ್ಯ ಮತ್ತು ಮೂಲಸೌಕರ್ಯ ಕ್ಷೇತ್ರಗಳ ಬಲವರ್ಧನೆಗೆ ಆದ್ಯತೆ ನೀಡಬೇಕೆಂಬ ಹಕ್ಕೊತ್ತಾಯದೊಂದಿಗೆ ಕಾರ್ಯಕ್ರಮ ಗಮನ ಸೆಳೆಯಿತು.

ಬಾಕಿ ವೇತನ ಬಿಡುಗಡೆಗಾಗಿ ಬಿಸಿಯೂಟ ಕಾರ್ಮಿಕರಿಂದ ಜಿಪಂ ಕಚೇರಿ ಮುಂದೆ ಧರಣಿ

ಬಳ್ಳಾರಿ : ತಮಗೆ ನೀಡಬೇಕಿರುವ 2 ತಿಂಗಳ ಬಾಕಿ ವೇತನವನ್ನು ಕೂಡಲೆ ಬಿಡುಗಡೆಗೆ ಆಗ್ರಹಿಸಿ ಇಂದು ಬಿಸಿಯೂಟ ಕಾರ್ಮಿಕರು ನಗರದಲ್ಲಿನ ಜಿಪಂಕಚೇರಿ ಮುಂದೆ ಧರಣಿ ಸತ್ಯಾಗ್ರಹ ನಡೆಸಿದರು.

ಎಐಯುಟಿಯುಸಿಗೆ ಸಂಯೋಜನೆಗೊಂಡ ಕರ್ನಾಟಕ ರಾಜ್ಯ ಸಂಯುಕ್ತ ಅಕ್ಷರ ದಾಸೋಹ ಕಾರ್ಮಿಕರ ಸಂಘದ ನೇತೃತ್ವದಲ್ಲಿ ಧರಣಿ ನಡೆಸಿ. ನಮ್ಮಲ್ಲಿ ಒಂಟಿ ಮಹಿಳೆಯರು, ವಿಧವೆಯರು ಇದ್ದು, ಈ ವೇತನದ ಮೇಲೆ ಅವಲಂಬಿತರಾಗಿದ್ದೇವೆ. ಜುಲೈ ಹಾಗೂ ಆಗಸ್ಟ್ ತಿಂಗಳುಗಳ ವೇತನ ಬರದೆ, ಜೀವನ ನಡೆಸುವುದೇ ಕಷ್ಟವಾಗಿದೆ. 2 ತಿಂಗಳ ವೇತನ ಬಿಡುಗಡೆ ಮಾಡಲು ಕೂಡಲೆ ಕ್ರಮ ಕೈಗೊಳ್ಳಬೇಕು.

ಮಕ್ಕಳಲ್ಲಿ ಅಪೌಷ್ಠಿಕತೆ ನಿವಾರಣೆ ಮಾಡಲು ಗಣಿಬಾಧಿತ ಪ್ರದೇಶಗಳಲ್ಲಿ ಕಾಳುಗಳನ್ನು ನೀಡುವ ಯೋಜನೆಯಡಿ ಬಿಸಿಯೂಟಕ್ಕೆ ಮಾಸಿಕ ರೂ.500 ನೀಡಲಾಗುತ್ತದೆ. ಈ ಮೊತ್ತವು ಕಡಿಮೆಯಾಗಿದ್ದು ಹೆಚ್ಚಿಸಬೇಕು.ಪ್ರೋತ್ಸಾಹ ಧನ ಹೆಚ್ಚಿಸಬೇಕು.

ಇದಲ್ಲದೆ ಹಿಂದಿನ ಶೈಕ್ಷಣಿಕ ವರ್ಷದ 2–3 ತಿಂಗಳು ಹಾಗೂ ಈ ಶೈಕ್ಷಣಿಕ ವರ್ಷದ 3 ತಿಂಗಳ ಕಾಳಿನ ಮೊತ್ತ ಇನ್ನೂವರೆಗೆ ನೀಡಿಲ್ಲ. ಇನ್ನು ಮುಂದೆ ಈ ಮೊತ್ತವನ್ನು ಮುಖ್ಯ ಗುರುಗಳ ಖಾತೆಯ ಬದಲಿಗೆ ಬಿಸಿಯೂಟ ಕಾರ್ಮಿಕರ ಖಾತೆಗೆ ನೇರವಾಗಿ ಜಮಾ ಮಾಡಬೇಕೆಂಬುದು ಆಗ್ರಹಿಸಿದರು.

ವರ್ಷಗಳಿಂದ ಮೊಟ್ಟೆ ಸುಲಿದ ಹಣವೂ ಬರುತ್ತಿಲ್ಲ. ದಿನವೂ ನೂರಾರು ಮೊಟ್ಟೆ ಸುಲಿದು ಶ್ರಮ ಹಾಕುತ್ತಾರೆ, ಆದರೆ ಅವರ ಶ್ರಮಕ್ಕೆ ತಕ್ಕನಂತ ಪ್ರತಿಫಲ ದೊರೆಯುತ್ತಿಲ್ಲ. ಮೊಟ್ಟೆ ಸುಲಿದ ಹಣ ಮುಖ್ಯ ಗುರುಗಳ ಖಾತೆಗೆ ಹಾಕಲಾಗುತ್ತದೆ.

ಆದರೆ ಈ ಹಣ ಬಿಸಿಯೂಟ ಕಾರ್ಮಿಕರಿಗೆ ತಲುಪುತ್ತಿಲ್ಲ. ಈ ಹಿಂದೆ ಸಾಕಷ್ಟು ಬಾರಿ ಸಂಬಂಪಟ್ಟ ಅಧಿಕಾರಿಗಳಿಗೆ ಮನವಿ ಮಾಡಿದಾಗಲೂ ಯಾವುದೇ ಪ್ರಯೋಜನ ಆಗಿಲ್ಲ.

ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ವಿಶೇಷ ಆದ್ಯತೆ : ತಹಶೀಲ್ದಾರ್

ಕಾರಟಗಿ: 'ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ಸರ್ಕಾರ ವಿಶೇಷ ಒತ್ತು ನೀಡಿದೆ. ಪ್ರಾದೇಶಿಕ ಅಸಮತೋಲನ ನಿರ್ಮೂಲನೆಗೆ ಅನೇಕ ಯೋಜನೆಗಳ ಜೊತೆಗೆ 371 (ಜೆ) ಕಲಂ ಜಾರಿಗೊಳಿಸಿದೆ. ಇವುಗಳ ಸದುಪಯೋಗಕ್ಕೆ ಸಾರ್ವಜನಿಕರು ಮುಂದಾಗಬೇಕು' ಎಂದು ತಹಶೀಲ್ದಾರ್ ಎಂ. ಕುಮಾರಸ್ವಾಮಿ ಹೇಳಿದರು.



ಪಟ್ಟಣದ ಕರ್ನಾಟಕ ಪಬ್ಲಿಕ್ ಶಾಲೆಯ ಸಿದ್ದೇಶ್ವರ ರಂಗಮಂದಿರದ ಆವರಣದಲ್ಲಿ ತಾಲ್ಲೂಕು ಆಡಳಿತ ಹಾಗೂ ಪುರಸಭೆ ವತಿಯಿಂದ ಆಯೋಜಿಸಿದ್ದ ಕಲ್ಯಾಣ ಕರ್ನಾಟಕ ಉತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ತಾಲ್ಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಹನುಮಂತಪ್ಪ ನಾಯಕ, ಪುರಸಭೆ ಮುಖ್ಯಾಧಿಕಾರಿ ಸಾಬಣ್ಣ ಕಟ್ಟಿಕಾರ್, ಪುರಸಭೆ ಅಧ್ಯಕ್ಷ ಮಂಜುನಾಥ್ ಮೇಗೂರು, ಇಒ ಲಕ್ಷ್ಮೀದೇವಿ ಯಾದವ್, ಸೋಮನಾಥ ದೊಡ್ಡಮನಿ, ಬಸವರಾಜ ಗುಂಡೂರು ಮಾತನಾಡಿದರು.

ಇನ್‌ಸ್ಪೆಕ್ಟರ್ ಸುಧೀರಕುಮಾರ ಬೆಂಕಿ, ಪುರಸಭೆ ಉಪಾಧ್ಯಕ್ಷೆ ಸುಜಾತ ನಾಗರಾಜ್, ಸ್ಥಾಯಿ ಸಮಿತಿ ಅಧ್ಯಕ್ಷ ದೊಡ್ಡ ಬಸವರಾಜ ಬೂದಿ, ನಾಗರಾಜ ಅರಳಿ, ರೇಣುಕಮ್ಮ, ದಯಾನಂದ, ಲಿಂಗೇಶ್ ಕಲ್ಗುಡಿ, ಶರಣಪ್ಪ ಸಂಗಟಿ ಇದ್ದರು.

ಕರಾಟೆ ತರಬೇತಿ ಯಿಂದ ಮಕ್ಕಳಲ್ಲಿ ಆತ್ಮ ವಿಶ್ವಾಸ ಬೆಳೆಯುತ್ತದೆ : ಮೀನಾಕ್ಷಿ ಬಣ್ಣದ ಭಾವಿ



ಕೊಪ್ಪಳ: ಇಂದಿನ ದಿನಗಳಲ್ಲಿ ಮಕ್ಕಳಿಗೆ ಅದರಲ್ಲಿ ವಿಶೇಷವಾಗಿ ಬಾಲಕಿಯರಿಗೆ ಶಿಕ್ಷಣದ ಜೊತೆಗೆ ದೈಹಿಕ ಸಾಮರ್ಥ್ಯ ಮತ್ತು ಆತ್ಮ ರಕ್ಷಣೆ ಹಾಗೂ ಶಿಸ್ತು ಬೆಳೆಸುವ ನಿಟ್ಟಿನಲ್ಲಿ ಕರಾಟೆ ತರಬೇತಿ ಅತ್ಯಂತ ಮಹತ್ವ ಪಡೆದುಕೊಂಡಿದೆ ಇದರಿಂದ ಮಕ್ಕಳಲ್ಲಿ ಆತ್ಮವಿಶ್ವಾಸ ಬೆಳೆಯುತ್ತದೆ ಎಂದು ಕೊಪ್ಪಳ ಇನ್ನರ್ ವೀಲ್ ಕ್ಲಬ್ ಅಧ್ಯಕ್ಷರಾದ ಮೀನಾಕ್ಷಿ ಬಣ್ಣದ ಭಾವಿ ಹೇಳಿದರು, ಅವರು ನಗರದ ಲೈನ್ಸ್ ಶಾಲೆಯಲ್ಲಿ ಇನ್ನರ್ ವೀಲ್ ಕ್ಲಬ್ (ಜಿಲ್ಲೆ 316) ಹಾಗೂ ಲೈನ್ಸ್ ಕ್ಲಬ್ ಇವುಗಳ ಸಹಯೋಗದಲ್ಲಿ ಶಾಲಾ ಬಾಲಕಿಯರಿಗಾಗಿ ಏರಿಪಡಸಿದ ಸಬಲೀಕರಣ ಹಾಗೂ ಸ್ವಯಂ ರಕ್ಷಣಾ ಕರಾಟೆ ತರಬೇತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಕರಾಟೆ ತರಬೇತಿ ಗೆ ಚಾಲನೆ ನೀಡಿ ಮಾತನಾಡಿದರು, ಮುಂದುವರೆದು ಮಾತನಾಡಿ ಕರಾಟೆ ಕೇವಲ ಆತ್ಮ ರಕ್ಷಣೆಗೆ ಅಷ್ಟೇ ಅಲ್ಲ ದೈಹಿಕ ಮತ್ತು ಮಾನಸಿಕ ಸದೃಢತೆಗೆ ಕರಾಟೆ ಸಹಕಾರಿಯಾಗುವ ಕ್ರೀಡೆ–ಯಾಗಿದೆ, ಇದರಿಂದ ಮಕ್ಕಳಲ್ಲಿ ಶಿಸ್ತು ಏಕಾಗ್ರತೆ ಸಮಯ ಪಾಲನೆ ಹಾಗು ಆತ್ಮವಿಶ್ವಾಸ ಹೆಚ್ಚುತ್ತದೆ ನಿಯಮಿತವಾಗಿ ತರಬೇತಿ ಪಡೆಯುವುದರಿಂದ ದೇಹದ ಚುರುಕುತನ ಸಮತೋಲನ ಮತ್ತು ದೈಹಿಕ ಸಾಮರ್ಥ್ಯವು ಕೂಡ ವೃದ್ಧಿಯಾಗುತ್ತದೆ,

ಶಾಲಾ ಕಾಲೇಜುಗಳಲ್ಲಿ ಕರಾಟೆ ತರಬೇತಿಗೆ ಹೆಚ್ಚಿನ ಪ್ರೋತ್ಸಾಹ ನೀಡಬೇಕು,

ವಿಶೇಷವಾಗಿ ಬಾಲಕಿಯರಿಗೆ ಆತ್ಮ ರಕ್ಷಣಾ ಕೌಶಲ್ಯಗಳನ್ನು ಕಲಿಸುವ ಮೂಲಕ ಅವರು ಆತ್ಮ ವಿಶ್ವಾಸ ದಿಂದ ಜೀವನ ನಡೆಸಲು ಸಾಧ್ಯವಾಗುತ್ತದೆ ಎಂದು ಕೊಪ್ಪಳ ಇನ್ನರ್ ವೀಲ್ ಕ್ಲಬ್ ಅಧ್ಯಕ್ಷರಾದ ಮೀನಾಕ್ಷಿಬಣ್ಣದಭಾವಿಹೇಳಿದರು,ಈಸಂದರ್ಭದಲ್ಲಿ ಬಾಲಕಿಯರಿಗೆ ಕರಾಟೆ ತರಬೇತಿ ನೀಡಿದ ಕರಾಟೆ ಮಾಸ್ಟರ್ ಮೌನೇಶ್ ಬಡಿಗೇರಗೆ ಕ್ಲಬ್ ಪರವಾಗಿ ಸನ್ಮಾನಿಸಲಾಯಿತು ಕಾರ್ಯಕ್ರಮದಲ್ಲಿ ಕ್ಲಬ್ಬಿನ ಕಾರ್ಯದರ್ಶಿ ಶ್ರೀದೇವಿ ಪಾಟೀಲ್ ಐಎಸ್ಓ ಲತಾ ಪಟ್ಟಣಶೆಟ್ಟಿ ಖಜಾಂಚಿ ಶಿಲ್ಪ ರಾಜು ಶಶಿಮಠ, ಸೇರಿದಂತೆ ಕ್ಲಬ್ಬಿನ ಪದಾಧಿಕಾರಿಗಳು ಸದಸ್ಯರು ಮತ್ತು ಕರಾಟೆ ತರಬೇತಿದಾರರು ಶಾಲೆಯ ಬಾಲಕಿಯರು ಪಾಲ್ಗೊಂಡಿದ್ದರು.

ಬರ ಘೋಷಣೆ ವಿಚಾರದದಲ್ಲಿ ಯಾವುದೇ ತಾರತಮ್ಯ, ರಾಜಕೀಯ ಮಾಡಿಲ್ಲ : ಸಚಿವ ಶಿವರಾಜ್ ತಂಗಡಗಿ

ಕೊಪ್ಪಳ: ಜಿಲ್ಲೆಯ ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸುವ ವಿಚಾರದಲ್ಲಿ ಯಾವುದೇ ತಾರತಮ್ಯ ಅಥವಾ ರಾಜಕೀಯ ಮಾಡಿಲ್ಲ. ಕೇಂದ್ರ ಸರ್ಕಾರದ ಮಾನದಂಡಗಳ ಆಧಾರದ ಮೇಲೆ ಕ್ರಮ ಕೈಗೊಳ್ಳಲಾಗುತ್ತಿದ್ದು, ಕೊಪ್ಪಳ ಜಿಲ್ಲೆಯ ಉಳಿದ ತಾಲೂಕುಗಳನ್ನೂ ಶೀಘ್ರದಲ್ಲೇ ಬರಪೀಡಿತ ಎಂದು ಘೋಷಿಸಲಾಗುವುದು ಎಂದು ಸಚಿವ ಶಿವರಾಜ್ ತಂಗಡಗಿ ಹೇಳಿದರು.

79ನೇ ಕಲ್ಯಾಣ ಕರ್ನಾಟಕ ಉತ್ಸವದಲ್ಲಿ ಭಾಗವಹಿಸಿದ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೊದಲ ಹಂತದಲ್ಲಿ ಕನಕಗಿರಿ, ಗಂಗಾವತಿ ಮತ್ತು ಕಾರಟಗಿ ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದೆ. ಉಳಿದ ತಾಲೂಕುಗಳ ಕುರಿತೂ ಅಗತ್ಯ ವರದಿಗಳ ಆಧಾರದ ಮೇಲೆ ಸಿದ್ಧತೆ ನಡೆಯುತ್ತಿದೆ ಎಂದು ತಿಳಿಸಿದರು.



ರ ಘೋಷಣೆಗೆ ಕೇಂದ್ರ ಸರ್ಕಾರ ನಿಗದಿಪಡಿಸಿರುವ ಮಾನದಂಡಗಳನ್ನು ಪಾಲಿಸಬೇಕಾಗುತ್ತದೆ. ತೇವಾಂಶದ ಕೊರತೆ, ಡ್ರೈ ಸ್ಪೆಲ್, ಮಳೆಯ ಅಭಾವ, ಬೆಳೆ ಹಾನಿ ಸೇರಿದಂತೆ ವಿವಿಧ ಅಂಶಗಳನ್ನು ಪರಿಶೀಲಿಸಿ ತಳಮಟ್ಟದ ವರದಿಗಳ ಆಧಾರದಲ್ಲಿ ಘೋಷಣೆ ಮಾಡಲಾಗುತ್ತದೆ. ಇದರಲ್ಲಿ ಯಾವುದೇ ರಾಜಕೀಯ ಇಲ್ಲ ಎಂದು ಸ್ಪಷ್ಟಪಡಿಸಿದರು.

ಒಂದೇ ಹಂತದಲ್ಲಿ ಎಲ್ಲ ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಬೇಕೆಂದರೆ, ಕೇಂದ್ರಸರ್ಕಾರವೇತನ್ನಮಾನದಂಡಗಳನ್ನು ಬದಲಿಸಬೇಕು. ಬಿಜೆಪಿ ನಾಯಕರು ಈ ಕುರಿತು ಕೇಂದ್ರದ ಮೇಲೆ ಒತ್ತಡ ಹೇರಲಿ ಎಂದು ಅವರು ಹೇಳಿದರು.

ಬರ ಘೋಷಣೆ ವಿಚಾರದಲ್ಲಿ ಕೆಲವರು ರಾಜಕೀಯ ಮಾಡುತ್ತಿದ್ದಾರೆ ಎಂದು ಆರೋಪಿಸಿದ ತಂಗಡಗಿ, ಗಂಗಾವತಿಯಲ್ಲಿ ನೀರಾವರಿ ಇದ್ದರೂ ಮಳೆಯ ಕೊರತೆ ಹೆಚ್ಚಿರುವ ಕಾರಣ ಬರ ಘೋಷಿಸಲಾಗಿದೆ. ಕುಷ್ಟಗಿಯಲ್ಲೂ ನಿಯಮಾನುಸಾರ ಬರ ಘೋಷಿಸಲು ಸರ್ಕಾರ ಸಿದ್ಧವಾಗಿದೆ ಎಂದು ಹೇಳಿದರು.

ಬಿಜೆಪಿ ನಾಯಕರ ಟೀಕೆಗಳಿಗೆ ತಂಗಡಗಿ ತಿರುಗೇಟು ನೀಡಿದ ಅವರು, ಗಂಗಾವತಿ ಶಾಸಕ ಜನಾರ್ದನ ರೆಡ್ಡಿ ಅವರೊಂದಿಗೆ ನಡೆದ ರಾಜಕೀಯ ವಾಗ್ವಾದವನ್ನು ಉಲ್ಲೇಖಿಸಿ, ವೈಯಕ್ತಿಕ ಸಹಾಯಗಳನ್ನು ಸಾರ್ವಜನಿಕವಾಗಿ ಹೇಳಿಕೊಳ್ಳುವುದು ಸರಿಯಲ್ಲ ಎಂದು ಪ್ರತಿಕ್ರಿಯಿಸಿದರು.

ಯುಪಿಐ ವಹಿವಾಟಿನ ಮೇಲೆ ವರ್ತಕರಿಗೆ ಶುಲ್ಕ ವಿಧಿಸುವ ಕೇಂದ್ರ ಸರ್ಕಾರದ ನಿರ್ಧಾರವನ್ನೂ ತಂಗಡಗಿ ಟೀಕಿಸಿದರು. ವರ್ತಕರ ಮೇಲೆ ವಿಧಿಸುವ ಶುಲ್ಕದ ಹೊರೆ ಅಂತಿಮವಾಗಿ ಗ್ರಾಹಕರ ಮೇಲೆಯೇ ಬೀಳುತ್ತದೆ ಎಂದು ಹೇಳಿ, ಈ ನಿರ್ಧಾರದ ವಿರುದ್ಧ ಜನರು ಹಾಗೂ ಪ್ರತಿಪಕ್ಷಗಳು ಹೋರಾಟ ನಡೆಸಲಿವೆ ಎಂದು ಹೇಳಿದರು.

ರಾಷ್ಟ್ರೀಯ ಪೋಷಣ ಮಾಸಾಚರಣೆ

ಬಳ್ಳಾರಿ : ಭಾರತ ಸರ್ಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮಂತ್ರಾಲಯದ 'ಪೋಷಣ್ ಅಭಿಯಾನ'ದಅಡಿಯಲ್ಲಿಪ್ರತಿವರ್ಷಆಚರಿಸಲಾಗುವ 30 ದಿನಗಳ ರಾಷ್ಟ್ರೀಯ ಜಾಗೃತಿ.ಅಭಿಯಾನದ ಕಾರ್ಯಕ್ರಮದಲ್ಲಿ. ಉಪ ನಿರ್ದೇಶಕರಾದ ಗಂಗಪ್ಪ. ಹಾಗು ಮೇಲ್ವಿಚಾರಕಾರದ ಶ್ರೀಮತಿ ಲಕ್ಷ್ಮೀ ದೇವಿ. ಜಿಲ್ಲಾ ಮಿಷನ್ ಶಕ್ತಿ ಸಂಯೋಜಕಿ.ಶ್ರೀಮತಿ ವಿದ್ಯಾ.ಲಿಂಗ ತಜ್ಞನರಾದ ಶ್ರೀ ಮತಿ ಅನ್ನಪೂರ್ಣಾ. ಮತ್ತು ಅಂಗನವಾಡಿ ಕಾರ್ಯಕರ್ತರು ಇದ್ದರು. ಜಿಲ್ಲಾ ಅರೋಗ್ಯ ನಿರೀಕ್ಷಣಾಧಿಕಾರಿಗಳಾದ ಎಂ.ಧರ್ಮನಗೌಡ ಇಲಾಖೆಯ ಸಂಪೂರ್ಣ ಮಾಹಿತಿ ನೀಡಿದರು.

ಅಪೌಷ್ಟಿಕತೆ ನಿರ್ಮೂಲನೆ: ಗರ್ಭಿಣಿಯರು, ಹಾಲುಣಿಸುವ ತಾಯಂದಿರು, ಹದಿಹರೆಯದ ಹೆಣ್ಣುಮಕ್ಕಳು ಮತ್ತು ಮಕ್ಕಳಲ್ಲಿ ಅಪೌಷ್ಟಿಕತೆ ಹಾಗೂ ರಕ್ತಹೀನತೆಯನ್ನು ತಡೆಗಟ್ಟುವುದು. ಸಮುದಾಯದ ಪಾಲ್ಗೊಳ್ಳುವಿಕೆ: ಸಾರ್ವಜನಿಕರಲ್ಲಿ ಪೌಷ್ಟಿಕ ಆಹಾರದ ಮಹತ್ವದ ಬಗ್ಗೆ ಅರಿವು ಮೂಡಿಸಿ 'ಜನ ಆಂದೋಲನ'ವನ್ನು ರೂಪಿಸುವುದು. ಮೊದಲ 1000 ದಿನಗಳ ಆರೈಕೆ: ಮಗುವಿನ ಗರ್ಭಾವಸ್ಥೆಯಿಂದ ಹಿಡಿದು 2 ವರ್ಷಗಳವರೆಗಿನ (ಮೊದಲ 1,000 ದಿನಗಳು) ಸೂಕ್ತ ಪೋಷಣೆ ಮತ್ತು ಆರೋಗ್ಯ ರಕ್ಷಣೆಗೆ ಆದ್ಯತೆ ನೀಡುವುದು ಎಂದು ತಿಳಿಸಿದರು.

ಪ್ರಮುಖ ಚಟುವಟಿಕೆಗಳು

ಅಂಗನವಾಡಿ ಕೇಂದ್ರಗಳಲ್ಲಿ ಜಾಗೃತಿ: ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರ ಮೂಲಕ ಸ್ಥಳೀಯವಾಗಿ ಲಭ್ಯವಿರುವ ಸಮತೋಲಿತ ಹಾಗೂ ಪೌಷ್ಟಿಕ ಆಹಾರಗಳ ಬಗ್ಗೆ ಮಾಹಿತಿ ನೀಡುವುದು.

ಆರೋಗ್ಯ ತಪಾಸಣೆ: ಮಕ್ಕಳ ಎತ್ತರ, ತೂಕದ ಅಳತೆ (ಮಗುವಿನ ಬೆಳವಣಿಗೆ ಮೇಲ್ವಿಚಾರಣೆ) ಮತ್ತು ಆರೋಗ್ಯ ಶಿಬಿರಗಳ ಆಯೋಜನೆ.

ಪೋಷಣ್ ಟ್ರ್ಯಾಕರ್ ತಂತ್ರಜ್ಞಾನದ ಮೂಲಕ ತಾಯಿ ಮತ್ತು ಮಗುವಿಗೆ ತಲುಪುವ ಆರೋಗ್ಯ ಸೇವೆಗಳನ್ನು ಡಿಜಿಟಲ್ ರೂಪದಲ್ಲಿ ಮೇಲ್ವಿಚಾರಣೆ ಮಾಡುವುದು. ಇದರ ಜೊತೆಯಲ್ಲಿ ಬೇಟಿ ಬಚಾವೋ ಬೇಟಿ ಪಡವೋ.ಲಿಂಗ ಪಕ್ಷಪಾತ ತೊಲಗಿಸಿ. ಹೆಣ್ಣನ್ನು ಉಳಿಸಿ.ಹೆಣ್ಣನ್ನು ಬೆಳಸಿ ಹೆಣ್ಣು ಮಕ್ಕಳಿಗೆ ಓದಿಸಿ. ಹಾಗೂ ಮಾತೃವಂದನಾ.ಭಾಗ್ಯ ಲಕ್ಷ್ಮೀ. ಸುಕನ್ಯಾ ಸಂವೃದ್ದಿಯೋಜನೆ. ಯೋಜನೆಗಳ ಬಗ್ಗೆ ಗರ್ಭಿಣಿ ಮಹಿಳೆಯರಿಗೆ.ತಾಯಂದಿರಿಗೆ. ಮತ್ತು ಕಿಶೋರಿಯರಿಗೆ ಅರೋಗ್ಯ ಸಂಬಂಧಿಸಿದ ಮಾಹಿತಿ ನೀಡಲಾಯಿತು.

ಮಹನೀಯರ ತ್ಯಾಗದಿಂದ ಸ್ವತಂತ್ರ ಉಸಿರು : ತಹಶೀಲ್ದಾರ್ ಚಂದ್ರಶೇಖರ ಗಾಳಿ

ಕನಕಗಿರಿ: 'ಮಹನೀಯರ ತ್ಯಾಗ ಬಲಿದಾನದಿಂದ ಪ್ರತಿಯೊಬ್ಬರು ಸ್ವತಂತ್ರವಾಗಿ ಉಸಿರಾಡುತ್ತಿದ್ದಾರೆ' ಎಂದು ತಹಶೀಲ್ದಾರ್ ಚಂದ್ರಶೇಖರ ಗಾಳಿ ಹೇಳಿದರು.

ಪಟ್ಟಣದ ಕೆಪಿಎಸ್ ಶಾಲಾ ಮೈದಾನದಲ್ಲಿ ತಾಲ್ಲೂಕುಆಡಳಿತ,ತಾಲ್ಲೂಕುಪಂಚಾಯತಿ ಮತ್ತುಪಟ್ಟಣಪಂಚಾಯತಿಸಹಯೋಗದಲ್ಲಿ ಗುರುವಾರ ಆಯೋಜಿಸಿದ್ದ 79ನೇ ಕಲ್ಯಾಣ ಕರ್ನಾಟಕ ಉತ್ಸವ ದಿನ ಆಚರಣೆಯಲ್ಲಿ ಅವರು ಮಾತನಾಡಿದರು.



ಸಂವಿಧಾನದ 371(ಜೆ) ಕಲಂ ಕಲ್ಯಾಣ ಕರ್ನಾಟಕದ ಜನರಿಗೆ ವರದಾನವಾಗಿದ್ದು, ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ಕೊಪ್ಪಳ, ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳ ಜನರಿಗೆ ಶಿಕ್ಷಣ ಹಾಗೂ ಸರ್ಕಾರಿ ಉದ್ಯೋಗದಲ್ಲಿ ವಿಶೇಷ ಮೀಸಲಾತಿ ನೀಡಲಾಗಿದೆ' ಎಂದರು.

ಪಟ್ಟಣ ಪಂಚಾಯಿತಿ ಅಧ್ಯಕ್ಷೆ ತನುಶ್ರೀ ಟಿ.ಜೆ. ರಾಮಚಂದ್ರ ಮಾತನಾಡಿ, 'ಸರ್ದಾರ್ ಪಟೇಲ್ ಅವರ ಆಪರೇಷನ್ ಪೋಲೋ ಕಾರ್ಯಾಚರಣೆಯಿಂದ ಹೈದರಾಬಾದ್ ಸಂಸ್ಥಾನ ಭಾರತಕ್ಕೆ ವಿಲೀನವಾಯಿತು. ಯುವಕರು ಇತಿಹಾಸವನ್ನು ತಿಳಿದುಕೊಳ್ಳಬೇಕು' ಎಂದರು.

ತಾಲ್ಲೂಕು ಪಂಚಾಯಿತಿ ಪ್ರಭಾರ ಕಾರ್ಯ ನಿರ್ವಹಣಾಧಿಕಾರಿ ಕೆ.ರಾಜಶೇಖರ, ಪಟ್ಟಣ ಪಂಚಾಯಿತಿ ಉಪಾಧ್ಯಕ್ಷ ಕಂಠಿರಂಗ ನಾಯಕ,ಪಿಐ ವೀರಣ್ಣ ಹಳ್ಳಿ, ಎಪಿಎಂಸಿ ಕಾರ್ಯದರ್ಶಿ ಸಾವಿತ್ರಿ ಸುರೇಶ ಪಾಟೀಲ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ವಿಜಯಲಕ್ಷ್ಮಿ ಹಿರೇಮಠ, ತಾಲ್ಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಹಜರತ್ ಹುಸೇನ್ ಸೇರಿದಂತೆ ಇತರರು ಇದ್ದರು.

ಶರಣಪ್ಪ ಚಳ್ಳಗೇರಿ ಸ್ವಾಗತಿಸಿದರು. ಕನಕಾಚಲ ಕಟ್ಟಿಮನಿ ನಿರೂಪಿಸಿದರು. ಧ್ವಜಾರೋಹಣದ ನಂತರ ಪೊಲೀಸರಿಂದ ಗೌರವ ವಂದನೆ ಸಲ್ಲಿಸಲಾಯಿತು.

ಡಿ–7 ಕಾಲುವೆಗೆ ಹೆಚ್ಚಿನ ನೀರು ಹರಿಸಲು ಆಗ್ರಹಿಸಿ ಕುರುಗೋಡಿನಲ್ಲಿ ರೈತರ ಧರಣಿ

ಬಳ್ಳಾರಿ : ತುಂಗಭದ್ರ ಬಲದಂಡೆ ಮೇಲ್ಮಟ್ಟದ ಕಾಲುವೆಯ ವಿತರಣಾ ಕಾಲುವೆ ಡಿ?7ಕ್ಕೆ 600 ಕ್ಯೂಸೆಕ್ಸ್ ಅಧಿಕ ನೀರು ಹರಿಸಿ ರೈತರ ಬೆಳೆಗಳನ್ನು ರಕ್ಷಿಸಬೇಕು ಎಂದು ಆಗ್ರಹಿಸಿ ಎಐಕೆಕೆಎಂಎಸ್ ನೇತೃತ್ವದಲ್ಲಿ ರೈತರು ಇಂದು ಕುರುಗೋಡಿನ ನೀರಾವರಿ ಇಲಾಖೆಯ ಕಚೇರಿ ಬಳಿ ಅನಿರ್ದಿಷ್ಟಾವಧಿ ಅಹೋರಾತ್ರಿ ಧರಣಿ ಆರಂಭಿಸಿದ್ದಾರೆ

ಈ ಸಂದರ್ಭದಲ್ಲಿ ಮಾತನಾಡಿದ ಸಂಘಟನೆಯ ಮುಖಂಡರು, ಕಾಲುವೆ–7ನ್ನು ಅವಲಂಬಿಸಿರುವ ಸಾವಿರಾರು ರೈತರು ಇದುವರೆಗೂ ಸಹ ಬೀಜವನ್ನು ಬಿತ್ತಲು ಆಗದ ಪರಿಸ್ಥಿತಿಯಲ್ಲಿ ಇದ್ದಾರೆ. ಇದುವರೆಗೂ ಸಾಕಷ್ಟು ರೈತರ ಭೂಮಿಗೆ ಒಂದು ಹನಿ ಸಹ ನೀರು ತಲುಪಿಲ್ಲ. ಈಗಾಗಲೇ ಬಿತ್ತಿದ ಬೆಳೆಗಳು ಸಹ ನೀರಿನ ಕೊರತೆಯಿಂದ ಸಂಕಷ್ಟದಲ್ಲಿವೆ. ರೈತರ ಬೆಳೆ ಸಂಪೂರ್ಣವಾಗಿ ಕೈ ಸೇರುವವರೆಗೆ ಅಗತ್ಯ ಪ್ರಮಾಣದ ನೀರು ಹರಿಸಬೇಕು. ನೀರಿನ ಹಂಚಿಕೆಯಲ್ಲಿ ಕೃಷಿಗೆ ಮೊದಲ ಆದ್ಯತೆ ನೀಡಬೇಕು ಎಂದು ಒತ್ತಾಯಿಸಿ. ಬೇಡಿಕೆ ಈಡೇರುವವರೆಗೆ ಹೋರಾಟ ಮುಂದುವರಿಯಲಿದೆ" ಎಂದು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಸಂಘಟನೆಯ ಜಿಲ್ಲಾಧ್ಯಕ್ಷ ಗೋವಿಂದ, ಜಿಲ್ಲಾ ಕಾರ್ಯದರ್ಶಿ ಗುರಳ್ಳಿ ರಾಜ ರೈತ ಮುಖಂಡ ಕಲಕಂಬ ಪಂಪಾಪತಿ, ತಾಲೂಕ್ ಕಾರ್ಯದರ್ಶಿ ಬಸವರಾಜ್, ರೈತರಾದ ಕೀರ್ತಿ ರೆಡ್ಡಿ, ನಾಗೇಶ್ವರ, ಹೇಮರೆಡ್ಡಿ, , ಏರಿಸ್ವಾಮಿ,
ಮಲ್ಲಿಕಾರ್ಜುನರೆಡ್ಡಿ,ಹನುಮಂತ, ಮಾಬುಸಾಬ್, ನಾರಾಯಣ ರೆಡ್ಡಿ, ಕೃಷ್ಣಾರೆಡ್ಡಿ,
ಬಸವನಗೌಡ, ಜಡಪ್ಪ ಮೊದಲಾದವರು ಪಾಲ್ಗೊಂಡಿದ್ದಾರೆ.

PUBLIC FAST KANNADA DAILY NEWS PAPER

ದಿನಾಂಕ : 22–09–2026

ಕಾಗವಾಡದಲ್ಲಿ ಹಿಂದೂ–ಮುಸ್ಲಿಂ ಭಾವೈಕ್ಯ ಮೆರೆದ ಗಣೇಶ ಚತುರ್ಥಿ ಆಚರಣೆ



ಕಾಗವಾಡ (ಬೆಳಗಾವಿ ಜಿಲ್ಲೆ): ತಾಲ್ಲೂಕಿನ ಉಗಾರ ಬುದ್ರುಕ್ ಗ್ರಾಮದ ಪದ್ಮಶ್ರೀ ಬಡಾವಣೆಯಲ್ಲಿ ಹಿಂದೂ? ಮುಸ್ಲಿಂ ಸಮುದಾಯದವರು ಒಗ್ಗೂಡಿ ಗಣೇಶೋತ್ಸವ ಆಚರಿಸುವ ಮೂಲಕ ಭಾವೈಕ್ಯ ಮೆರೆದಿದ್ದಾರೆ.

ಮುಸ್ಲಿಮರೇ ಹೆಚ್ಚಿರುವ ಈ ಬಡಾವಣೆಯ ಮೆಹಬೂಬ್ ಸುಭಾನಿ ದರ್ಗಾ ಸಮೀಪದಲ್ಲಿ 2019ರಿಂದ ಹಿಂದೂ ಹಾಗೂ ಮುಸ್ಲಿಂ ಯುವಕರು ಜತೆಗೂಡಿ ಸಾರ್ವಜನಿಕ ಗಣೇಶ ಮೂರ್ತಿ ಪ್ರತಿಷ್ಠಾಪಿಸುತ್ತ ಬಂದಿದ್ದಾರೆ. ಇದಕ್ಕಾಗಿಯೇ ಹಿಂದೂ ಮುಸ್ಲಿಂ ಗಣೇಶೋತ್ಸವ ಮಂಡಳಿ ನೋಂದಣಿ ಮಾಡಿಸಿದ್ದಾರೆ.

ಚತುರ್ಥಿ ದಿನಗಳು ಮುಗಿಯುವವರೆಗೂ ಬೆಳಿಗ್ಗೆ, ಸಂಜೆ, ರಾತ್ರಿ ಪೂಜೆಗಳಲ್ಲಿ ಎರಡೂ ಧರ್ಮೀಯರು ಸಕ್ರಿಯ ಪಾಲ್ಗೊಳ್ಳುತ್ತಾರೆ.

ದಿನಕ್ಕೊಂದು ಸಿಹಿಖಾದ್ಯ ಮಾಡಿ ನೈವೇದ್ಯ ಇಡುತ್ತಾರೆ. 7ನೇ ದಿನ ಬಡಾವಣೆಯ ಎಲ್ಲರಿಗೂ ಮಹಾಪ್ರಸಾದ ವ್ಯವಸ್ಥೆ ಮಾಡಿ, ಮೂರ್ತಿ ವಿಸರ್ಜನೆ ಮಾಡುವುದು ವರ್ಷಗಳ ರೂಢಿ. 'ಹಿಂದೂ ಮುಸ್ಲಿಂ ಸಮುದಾಯದವರು ಒಗ್ಗಟ್ಟಿನಿಂದ ಗಣೇಶೋತ್ಸವ ಆಚರಿಸುತ್ತಿದ್ದೇವೆ. ನಮ್ಮ ಮಂಡಳಿಯ ಹೆಸರೇ ಹಿಂದೂ?ಮುಸ್ಲಿಂ ಗಣೇಶೋತ್ಸವ ಮಂಡಳಿ. ಪರಸ್ಪರರ ಹಬ್ಬಗಳಲ್ಲಿ ಭಾಗವಹಿಸುವ ಮೂಲಕ ಸೌಹಾರ್ದ ಕಾಪಾಡಿಕೊಂಡು ಬರುತ್ತಿದ್ದೇವೆ. ಅದರಂತೆ ಸೆ. 23ರಂದು ನಡೆಯಲಿರುವ ಮಾಬು ಸುಭಾನಿ ದರ್ಗಾದ ಉರುಸ್ ಕಾರ್ಯಕ್ರಮವನ್ನೂ ಎರಡೂ ಸಮುದಾಯದವರು ಒಗ್ಗೂಡಿ ಆಚರಿಸಲು ಸಿದ್ಧತೆ ನಡೆಸಿದ್ದೇವೆ. ಸಾವಿರಕ್ಕೂ ಹೆಚ್ಚು ಜನರಿಗೆ ಮಹಾಪ್ರಸಾದದ ವ್ಯವಸ್ಥೆ ಮಾಡಲಾಗುತ್ತಿದೆ' ಎಂದು ಮುಖಂಡ ಅಮೀನ ಶೇಖ್ 'ಪ್ರಜಾವಾಣಿ'ಗೆ ಮಾಹಿತಿ ನೀಡಿದರು.

ಪ್ರಕಾಶ ಕೋಳಿ, ಅಪ್ಪಾಸಾಬ್ ಖಂಡೇರಜೂರ, ಅಪ್ಪಾಸಾಬ್ ಸದಲಗೆ, ಬಾಳು ಜಮಖಾನೆ, ಮುನಾಫ್ ಚೌಧರಿ, ರಾಕೇಶ ಕೋಳಿ, ದಾದಾಪೀರ ನೇಜ–ಕರ, ರಿಯಾಜ್ ಮಾಂಜರೆ, ಮೈಬೂಬ್ ನೇಜಕರ, ಮಾರುತಿ ಕೋಳಿ ಈ ಮಂಡಳಿ ಮುನ್ನಡೆಸಿದ್ದಾರೆ.

ರಾಜ್ಯದ 180 ತಾಲ್ಲೂಕು ಬರಪೀಡಿತ ಎಂದು ಘೋಷಿಸಿ: ಜಗದೀಶ ಶೆಟ್ಟರ್

ಬೆಳಗಾವಿ: 'ಇಡೀ ರಾಜ್ಯದಲ್ಲಿ ಬರದ ಛಾಯೆ ಆವರಿಸಿದೆ. 180ಕ್ಕೂ ಅಧಿಕ ತಾಲ್ಲೂಕು ಸಂಕಷ್ಟ ಎದುರಿಸುತ್ತಿವೆ. ರಾಜ್ಯ ಸರ್ಕಾರ ತ್ವರಿತವಾಗಿ ಬರ ಪರಿಹಾರ ಕಾರ್ಯಗಳನ್ನು ಕೈಗೊಳ್ಳಬೇಕು' ಎಂದು ಸಂಸದ ಜಗದೀಶ್ ಶೆಟ್ಟರ್ ಆಗ್ರಹಿಸಿದರು.

ಇಲ್ಲಿ ಗುರುವಾರ ಸುದ್ದಿಗಾರರ ಜತೆಗೆ ಮಾತನಾಡಿದ ಅವರು, 'ರಾಜ್ಯದಲ್ಲಿ ಬಿಜೆಪಿ ಅಧಿಕಾರದಲ್ಲಿದ್ದಾಗ ಕೇಂದ್ರದ ನೆರವಿಗೆ ಕಾಯಲಿಲ್ಲ. ಬದಲಿಗೆ, ಬರಪೀಡಿತ ತಾಲ್ಲೂಕು ಘೋಷಿಸಿ ಪರಿಹಾರ ಕೆಲಸ ಕೈಗೊಂಡಿತ್ತು. ಆದರೆ, ಕಾಂಗ್ರೆಸ್ ಸರ್ಕಾರ ತಾಂತ್ರಿಕ ಕಾರಣ ನೀಡಿ, ಸಂಕಷ್ಟಕ್ಕೀಡಾದ ಎಲ್ಲ ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಲು ವಿಳಂಬ ಮಾಡುತ್ತಿರುವುದು ಸರಿಯಲ್ಲ' ಎಂದು ಆಪಾದಿಸಿದರು.

ಬರಪೀಡಿತ ತಾಲ್ಲೂಕುಗಳ ಘೋಷಣೆ ವೇಳೆ, ಸರ್ಕಾರ ತಾರತಮ್ಯ ಮಾಡುವುದನ್ನು ನಿಲ್ಲಿಸಬೇಕು. ಬೆಳಗಾವಿ ಜಿಲ್ಲೆ ಸೇರಿದಂತೆ, ಇಡೀ ರಾಜ್ಯದ 180ಕ್ಕೂ ಅಧಿಕ ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಬೇಕು' ಎಂದು ಒತ್ತಾಯಿಸಿದರು.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಕೇಂದ್ರದ ಮೇಲೆ ಆರೋಪ ಹೊರಿಸುತ್ತ ಎನ್‌ಡಿಆರ್‌ಎಫ್ ಅನುದಾನಕ್ಕಾಗಿ ಕಾಯುತ್ತ ಕುಳಿತುಕೊಳ್ಳುವ ಬದಲಿಗೆ, ಸಂಕಷ್ಟದಲ್ಲಿರುವ ಜನರ ನೆರವಿಗೆ ಧಾವಿಸಬೇಕು' ಎಂದು ಒತ್ತಾಯಿಸಿದರು.

ಶಿವಕುಮಾರ್‌ತಾವುಅಧಿಕಾರವಹಿಸಿಕೊಂಡ ನಂತರ, ರಾಜ್ಯಕ್ಕೆ ಉತ್ತಮ ಆಡಳಿತ ನೀಡುವುದಾಗಿ ಭರವಸೆ ಕೊಟ್ಟಿದ್ದರು. ಆದರೆ, ಜನರ ನೆರವಿಗೆ ಬಂದಿಲ್ಲ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಹಿಂದಿಕ್ಕಿ ತಮ್ಮ ವರ್ಚಸ್ಸು ಹೆಚ್ಚಿಸಿಕೊಳ್ಳುವ ಉದ್ದೇಶದಿಂದ ಅವರು ರಾಜ್ಯದಾದ್ಯಂತ ಪ್ರವಾಸ ಕೈಗೊಂಡಿದ್ದಾರೆಯೇ ಹೊರತು; ಜನರಿಗೇನೂ ಪ್ರಯೋಜನವಾಗಿಲ್ಲ' ಎಂದು ಟೀಕಿಸಿದರು.

ರಾಜ್ಯ ಸರ್ಕಾರದ ನಿರ್ಲಕ್ಷ್ಯ; ಕಾಮಗಾರಿ ವಿಳಂಬ: 'ಬೆಳಗಾವಿ ಚನ್ನಮ್ಮನ ಕಿತ್ತೂರು? ಧಾರವಾಡ ನೇರ ರೈಲ್ವೆ ಮಾರ್ಗದ ಅನುಷ್ಠಾನಕ್ಕಾಗಿ ಕೇಂದ್ರ 960 ಕೋಟಿ ಬಿಡುಗಡೆ ಮಾಡಿದೆ.

ಭೂಸ್ವಾಧೀನ ಪ್ರಕ್ರಿಯೆಯು ಅಂತಿಮ ಹಂತದಲ್ಲಿದೆ. ಆದರೆ, ಭೂಮಾಲೀಕರಿಗೆ ಪರಿಹಾರವಾಗಿ ನೀಡಲು 500 ಕೋಟಿ ಬೇಕಿದೆ.

ಈ ಮೊತ್ತ ರಾಜ್ಯ ಸರ್ಕಾರದಿಂದ ಸಂದಾಯವಾಗಬೇಕಿದೆ. ಆದರೆ, ಎಂಟು ತಿಂಗಳ ಹಿಂದೆ 50 ಕೋಟಿ ಮಾತ್ರ ಬಿಡುಗಡೆ ಮಾಡಿದ್ದರಿಂದ ಯೋಜನೆ ಕಾಮಗಾರಿ ವಿಳಂಬವಾಗಿದೆ' ಎಂದು ಹೇಳಿದರು.



ಇಂಧನ ಬಂಕ್‌ಗಳ ಬಾಕಿ ಹಣವನ್ನು ಕಳೆದ 8 ತಿಂಗಳಿಂದ ಪಾವತಿಸದ ಕಾರಣ, ಮುಂದಿನ ದಿನಗಳಲ್ಲಿ ಸರ್ಕಾರಿ ವಾಹನಗಳಿಗೆ ಇಂಧನ ಸಿಗದಿರುವ ಪರಿಸ್ಥಿತಿ ಎದುರಾಗಬಹುದು' ಎಂದು ಶೆಟ್ಟರ್ ತಿಳಿಸಿದರು.

ಪ್ರಧಾನಿ ನರೇಂದ್ರ ಮೋದಿ ಜನ್ಮದಿನ ಅಂಗವಾಗಿಸೆಪ್ಟೆಂಬರ್17ರಿಂದಅಕ್ಟೋಬರ್ 17ರವರೆಗೆ ಒಂದು ತಿಂಗಳು ವಿವಿಧ ಕಾರ್ಯಕ್ರಮ ಆಯೋಜಿಸುತ್ತೇವೆ. ಮೋದಿ 13 ವರ್ಷ ಗುಜರಾತ್ ಮುಖ್ಯಮಂತ್ರಿಯಾಗಿ ಕೆಲಸ ಮಾಡಿದ್ದಾರೆ. ಕಳೆದ 12 ವರ್ಷಗಳಿಂದ ಪ್ರಧಾನಿ ಆಗಿದ್ದಾರೆ. ಜನರಿಗೆ ಅವರ ಸಾಧನೆ ತಲುಪಿಸಲಾಗುವುದು' ಎಂದು ಶೆಟ್ಟರ್ ತಿಳಿಸಿದರು.

ಸಂಸದರ ನಿಧಿಯಲ್ಲಿ ಕಾಡಾ ಕಚೇರಿ ಬಳಿ ನಿರ್ಮಿಸಿದ ಬಸ್ ತಂಗುದಾಣವನ್ನು ಇಂದು ಉದ್ಘಾಟಿಸಲಾಗಿದೆ. ಕೇಂದ್ರದ ಅನುದಾನದಿಂದ ಬೆಳಗಾವಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ಬಿಮ್ಸ್) ಆಸ್ಪತ್ರೆಯಲ್ಲಿ ಅಂಗವಿಕಲರಿಗೆ ಸಾಧನ, ಸಲಕರಣೆ ವಿತರಿಸಲಾಗಿದೆ' ಎಂದು ಹೇಳಿದರು.

ಬಿಜೆಪಿ ರಾಜ್ಯ ಘಟಕದ ಉಪಾಧ್ಯಕ್ಷ ಅನಿಲ ಬೆನಕೆ, ಮಾಜಿ ಸಂಸದೆ ಮಂಗಲಾ ಅಂಗಡಿ, ಮಾಜಿ ಶಾಸಕ ಸಂಜಯ ಪಾಟೀಲ, ಬಿಜೆಪಿ ಬೆಳಗಾವಿ ಗ್ರಾಮೀಣ ಜಿಲ್ಲಾ ಘಟಕದ ಅಧ್ಯಕ್ಷ ಸುಭಾಷ ಪಾಟೀಲ, ಕಿರಣ ಜಾಧವ್ ಇದ್ದರು.

ಮೂರ್ನಾಲ್ಕು ವಿಕೆಟ್ ಉರುಳಬಹುದು

ಕಾಂಗ್ರೆಸ್‌ನಲ್ಲಿ ಆಂತರಿಕ ಭಿನ್ನಮತ ತೀವ್ರಗೊಂಡಿದ್ದು, ಸರ್ಕಾರದಲ್ಲಿ ಅಸ್ಥಿರತೆ ಉಂಟಾಗಿದೆ. ಸ್ವತಃ ಕಾಂಗ್ರೆಸ್ ನಾಯಕರೇ ನೀಡಿದ ದೂರುಗಳ ಹಿನ್ನೆಲೆಯಲ್ಲಿ ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಅವರು ಜಾರಿ ನಿರ್ದೇಶನಾಲಯದ ಶೋಧನೆಗೆ ಒಳಗಾಗಬೇಕಾಯಿತು. ಇ.ಡಿ ಮತ್ತು ಸಿಬಿಐ ಸ್ವಾಯತ್ತ ಸಂಸ್ಥೆಗಳಾಗಿದ್ದು, ದಾಖಲೆಗಳನ್ನು ಪಡೆದ ನಂತರವೇ ಶೋಧನೆ ನಡೆಸುತ್ತವೆ. ಇತ್ತೀಚೆಗೆ ಒಬ್ಬ ಸಚಿವರು ರಾಜೀನಾಮೆ ನೀಡಿರುವುದನ್ನು ನಾವು ನೋಡಿದ್ದೇವೆ. ಮುಂದಿನ ದಿನಗಳಲ್ಲಿ ಇನ್ನೂ ಮೂರ್ನಾಲ್ಕು ವಿಕೆಟ್‌ಗಳು' (ಸಚಿವರು) ಉರುಳಬಹುದು' ಎಂದು ಶೆಟ್ಟರ್ ಹೇಳಿದರು.

ರೋಗಿಗಳ ಸುರಕ್ಷತೆಯೇ ಆದ್ಯತೆಯಾಗಲಿ ಎಂದು ಡಾ. ದಯಾನಂದ ಕರೆ

ಬೆಳಗಾವಿ: 'ಚಿಕಿತ್ಸೆ ವೇಳೆ ರೋಗಿಗಳ ಸುರಕ್ಷತೆ ಖಚಿತಪಡಿಸಿಕೊಳ್ಳಲು ಆರೋಗ್ಯ ಸಂಸ್ಥೆಗಳು, ವೈದ್ಯಕೀಯ ಸಿಬ್ಬಂದಿ, ರೋಗಿಗಳು, ಕುಟುಂಬ ಸೇರಿದಂತೆ ಎಲ್ಲ ಸಿಬ್ಬಂದಿ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು' ಎಂದು ಕೆಎಲ್‌ಇ ಸಂಸ್ಥೆಯ ಡಾ.ಪ್ರಭಾಕರ ಕೋರೆ ಆಸ್ಪತ್ರೆ ಹಾಗೂ ವೈದ್ಯಕೀಯ ಸಂಶೋಧನಾ ಕೇಂದ್ರದ ನಿರ್ದೇಶಕ ಡಾ. ಕರ್ನಲ್ ಎಂ. ದಯಾನಂದ ಕರೆ ನೀಡಿದರು.

ಸಂಶೋಧನಾ ಕೇಂದ್ರದಲ್ಲಿ ಗುರುವಾರ ಏರ್ಪಡಿಸಿದ್ದ, ವಿಶ್ವ ರೋಗಿ ಸುರಕ್ಷತಾ ದಿನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು,ಹೃದಯಸಂಬಂಧಿತಕಾಯಿಲೆಗಳು,



ಕ್ಯಾನ್ಸರ್, ಮಧುಮೇಹ ಹಾಗೂ ದೀರ್ಘಕಾಲೀನಉಸಿರಾಟದಕಾಯಿಲೆಗಳು ಪ್ರಮುಖ ಅಸಾಂಕ್ರಾಮಿಕ ರೋಗಗಳಾಗಿವೆ. ಇವುಗಳಿಗೆ ದೀರ್ಘಕಾಲದ ಚಿಕಿತ್ಸೆ ಮತ್ತು ನಿರಂತರ ಆರೈಕೆಯ ಅಗತ್ಯವಿದೆ' ಎಂದು ತಿಳಿಸಿದರು.

ರೋಗಿಸುರಕ್ಷತೆಕುರಿತುಜಾಗೃತಿಮೂಡಿಸುವ ಕಿರು ನಾಟಕ ಪ್ರದರ್ಶಿಸಲಾಯಿತು. ಕ್ಲಿನಿಕಲ್ ಸರ್ವಿಸ್ ಡೈರೆಕ್ಟರ್ ಡಾ. ಮಾಧವ ಪ್ರಭು, ರೋಗಿ ಸುರಕ್ಷತಾ ಅಧಿಕಾರಿ ಡಾ.ವಿ.ಎ. ಕೋಠಿವಾಲೆ ಮಾತನಾಡಿದರು.

ಕ್ಲಿನಿಕಲ್ ಫಾರ್ಮಕಾಲಜಿಸ್ಟ್ ಡಾ. ಬಿ.ಬಿ. ಹಬೀಬಾ ಔಷಧಿ ಸುರಕ್ಷತೆ ಕುರಿತು ವಿವರಿಸಿದರು. ಡಾ. ರಾಜಶೇಖರ ಸೋಮನಟ್ಟಿ, ಎನ್. ಲೋಕೇಶ, ವಿನಯ ಬೇದ್ರೆ, ರವಿ ಸಂಕೇಶ್ವರಿ, ಜೆ.ಡಿ. ಮಲ್ಲಾಪೂರ, ಪ್ರೇಮಾನಂದ ಗುಗ್ಗರಿ, ರುತುಜಾ, ಶ್ವೇತಾ, ಅಲಗೌಡಾ ಪಾಟೀಲ, ಮಹಾಂತೇಶ ದಿವಟಗಿ ಇದ್ದರು. ಡಾ.ದೀಪಕ್ ಕರನಮ್ ಸ್ವಾಗತಿಸಿದರು. ಡಾ.ವಿದ್ಯಾ ನಿರೂಪಿಸಿದರು.

ಈ.ಡಿ. ದಾಳಿಗೆ ಸಂಬಂಧಿಸಿದ ದೂರುದಾರರ ಬಗ್ಗೆ ಖಚಿತ ಮಾಹಿತಿ ಇಲ್ಲ : ಸತೀಶ್ ಜಾರಕಿಹೊಳಿ

ಬೆಳಗಾವಿ : ಜಾರಿ ನಿರ್ದೇಶನಾಲಯದ ದಾಳಿಗೆ ಸಂಬಂಧಿಸಿದಂತೆ ಇಂತಹವರೇ ದೂರು ನೀಡಿದ್ದಾರೆ ಎಂಬ ಬಗ್ಗೆ ಯಾವುದೇ ಖಚಿತ ಮಾಹಿತಿ ಇಲ್ಲ. ಈ ಕುರಿತು ಚರ್ಚಿಸಿ, ಅಗತ್ಯ ದಾಖಲೆಗಳನ್ನು ಪರಿಶೀಲಿಸಿದ ಬಳಿಕವೇ ಪ್ರತಿಕ್ರಿಯಿಸಲಾಗುವುದು. ಸೂಕ್ತ ದಾಖಲೆಗಳಿಲ್ಲದೆ ಯಾರ ಮೇಲೂ ಆರೋಪ ಮಾಡಲು ಸಾಧ್ಯವಿಲ್ಲ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದಾರೆ. ನಗರದ ಸುವರ್ಣ ವಿಧಾನಸೌಧದಲ್ಲಿ ಮಾಧ್ಯಮ ಪ್ರತಿನಿಧಿಗಳ ಪ್ರಶ್ನೆಗೆ ಪ್ರತಿಕ್ರಿಯಿಸಿದ



ಅವರು, ಈ.ಡಿ. ದಾಳಿಗೆ ಸಂಬಂಧಿಸಿದ ವಿಚಾರಗಳಲ್ಲಿ ಅಗತ್ಯ ದಾಖಲೆಗಳು ಹಾಗೂ ಮಾಹಿತಿಯನ್ನು ಪರಿಶೀಲಿಸಿದ ನಂತರ ಮಾತನಾಡುವುದಾಗಿ ಸ್ಪಷ್ಟಪಡಿಸಿದರು.

ಎಸ್ಟಿ ಸಮುದಾಯದ ನಾಯಕರನ್ನು ತುಳಿಯುವ ಪ್ರಯತ್ನ ನಡೆಯುತ್ತಿದೆ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಕೆಲವೆಡೆ ಇಂತಹ ಘಟನೆಗಳು ನಡೆದಿವೆ. ಮುಂದಿನ ದಿನಗಳಲ್ಲಿ ನೋಡೋಣ ಎಂದು ಉತ್ತರಿಸಿದರು.

ಖಾನಾಪುರ ಬಳಿ ಟೆಂಪೊ ಕ್ಯಾಂಟರ್ ಡಿಕ್ಕಿ: ಇಬ್ಬರಿಗೆ ಗಾಯ

ಖಾನಾಪುರ: ತಾಲ್ಲೂಕಿನ ಜೈನಕೊಪ್ಪ ಕ್ರಾಸ್ ಬಳಿ ಜಾಂಬೋಟಿ ಜತ್ತ ರಾಜ್ಯ ಹೆದ್ದಾರಿಯಲ್ಲಿ ಗುರುವಾರ ಮಧ್ಯಾಹ್ನ ಟೆಂಪೊ ಕ್ಯಾಂಟ–ರ್ ನಡುವೆ ಸಂಭವಿಸಿದ ಮುಖಾಮುಖಿ ಡಿಕ್ಕಿಯಲ್ಲಿ ಟೆಂಪೊ ಕ್ಲೀನರ್ ಮತ್ತು ಕ್ಯಾಂಟ–ರ್ ಚಾಲಕನಿಗೆ ಗಾಯಗಳಾಗಿವೆ.

ಅಪಘಾತದ ಪರಿಣಾಮ ಎರಡೂ ವಾಹನಗಳ ಮುಂದಿನ ಭಾಗ ನಜ್ಜುಗುಜ್ಜಾಗಿದ್ದು, ಅಪಘಾತದ ರಭಸಕ್ಕೆ ಕ್ಯಾಂಟರ್ ಚಾಲಕ ಮತ್ತು ಟೆಂಪೊ ಕ್ಲೀನರ್ ವಾಹನಗಳಲ್ಲಿ ಸಿಲುಕಿದ್ದರು. ಸ್ಥಳೀಯರ ನೆರವಿನಿಂದ ಚಾಲಕ ಮತ್ತು ಕ್ಲೀನರ್ ನನ್ನು ವಾಹನಗಳಿಂದ ಹೊರತೆಗೆದು ಆಸ್ಪತ್ರೆಗೆ ಸಾಗಿಸಲಾಗಿದೆ.

ಕ್ಯಾಂಟರ್ ಚಾಲಕನಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಗಂಭೀರವಾಗಿ ಗಾಯಗೊಂಡ ನಾಗೇಶ (24) ಬೆಳಗಾವಿ ಜಿಲ್ಲಾಸ್ಪತ್ರೆಯಲ್ಲಿ ದಾಖಲಾಗಿ ಚಿಕಿತ್ಸೆ ಪಡೆ–ಯುತ್ತಿದ್ದಾರೆ. ಖಾನಾಪುರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಜೀವನದಲ್ಲಿ ಅಹಿಂಸೆಯ ಸಂದೇಶವನ್ನು ಅಳವಡಿಕೊಳ್ಳಿ: ಕುಲರತ್ನಭೂಷಣ ಮಹಾರಾಜ

ರಬಕವಿ : ಸಮಾಜದಲ್ಲಿನ ಕಲುಷಿತ ಮನೋಭಾವ ಹಾಗೂ ದುಷ್ಪರಿಣಾಮಗಳನ್ನು ಶುದ್ಧೀಕರಿಸಿ, ಅಧ್ಯಾತ್ಮಿಕ ಹಾಗೂ ಸಾಮಾಜಿಕ ಬದುಕಿಗೆ ಮಾರ್ಗದರ್ಶನ ನೀಡುವವರೇ ಮುನಿಗಳು. ಅವರ ತ್ಯಾಗ, ಸಂಯಮ ಮತ್ತು ಅಹಿಂಸೆಯ ಸಂದೇಶವನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಉತ್ತಮ ಸಮಾಜ ನಿರ್ಮಾಣ ಸಾಧ್ಯ ಎಂದು ಹಳಿಂಗಳಿ ಭದ್ರಗಿರಿ ಬೆಟ್ಟದ ಜೈನ ಮುನಿ ಆಚಾರ್ಯ ಶ್ರೀ 108 ಕುಲರತ್ನಭೂಷಣ ಮಹಾರಾಜರು ಹೇಳಿದರು.

ಸಮೀಪದ ಹಳಿಂಗಳಿ ಭದ್ರಗಿರಿ ಬೆಟ್ಟದಲ್ಲಿ ಚಾತುರ್ಮಾಸದ ಅಂಗವಾಗಿ ಶುಕ್ರವಾರ ಬೆಳಿಗ್ಗೆ ನಡೆದ ಮಕ್ಕಳ ಸಂಸ್ಕಾರ ಶಿಬಿರದಲ್ಲಿ ಆಶೀರ್ವಚನ ನೀಡಿ ಅವರು ಮಾತನಾಡಿದರು.

ಮುನಿಗಳ ಜೀವನವು ಸಂಪೂರ್ಣವಾಗಿ ಸಮಾಜದಉದ್ಧಾರಕ್ಕೆಸಮರ್ಪಿತವಾಗಿರುತ್ತದೆ. ಮುನಿಗಳಿಗೆ ಕಾಲಲ್ಲಿ ಪಾದುಕೆ, ತಲೆಯ ಮೇಲೆ ಕಿರೀಟ, ಬ್ಯಾಂಕಿನಲ್ಲಿ ಖಾತೆ, ಮೈಮೇಲೆ ಬಟ್ಟೆ ಅಥವಾ ಮನಸ್ಸಿನಲ್ಲಿ ಕಲುಷಿತ ಭಾವನೆ ಇರುವುದಿಲ್ಲ. ಯಾರೊಂದಿಗೂ ಕಲಹ ಮಾಡದೆ ತ್ಯಾಗ, ಸಂಯಮ ಹಾಗೂ ಪರಿಶುದ್ಧ ಮನಸ್ಸಿನಿಂದ ಜೀವನ ಸಾಗಿಸುವವರು ದಿಗಂಬರ ಮುನಿಗಳಾಗಿ ಸಮಾಜಕ್ಕೆ ಆದರ್ಶರಾಗಿರುತ್ತಾರೋ ಅವರೇ ಮುನಿಗಳು ಎಂದು ತಿಳಿಸಿದರು.

ಮಕ್ಕಳು ಮುನಿಗಳು ಬೋಧಿಸುವ ಆಚಾರ



ವಿಚಾರಗಳನ್ನು ಜೀವನದಲ್ಲಿ ಅಳವಡಿಸಿ ಕೊಳ್ಳಬೇಕು. ಹಿರಿಯರನ್ನು ಗೌರವಿಸುವುದು. ಸತ್ಯ, ಅಹಿಂಸೆ, ಶಿಸ್ತು, ಪರೋಪಕಾರಹಾಗೂಉತ್ತಮಸಂಸ್ಕಾರಗಳನ್ನು ಬೆಳೆಸಿಕೊಳ್ಳಬೇಕು. ಇಂದಿನ ಮಕ್ಕಳು ಉತ್ತಮ ಸಂಸ್ಕಾರಗಳನ್ನು ರೂಢಿಸಿಕೊಂಡರೆ ಮುಂದಿನ ಪೀಳಿಗೆಗೆ ಭಾರತೀಯ ಸಂಸ್ಕೃತಿ ಮತ್ತು ಪರಂಪರೆಯನ್ನು ಉಳಿಸಿ ಬೆಳೆಸಲು ಸಾಧ್ಯವಾಗುತ್ತದೆ ಎಂದರು.

ಸಂಸ್ಕಾರ ಶಿಬಿರವು ಮಕ್ಕಳಲ್ಲಿ ನೈತಿಕ ಮೌಲ್ಯಗಳು, ಧಾರ್ಮಿಕ ಭಾವನೆ ಹಾಗೂ ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸುವಲ್ಲಿ ಮಹತ್ವದ ಪಾತ್ರ ವಹಿಸುತ್ತದೆ. ಇಂತಹ ಶಿಬಿರಗಳಲ್ಲಿ ಮಕ್ಕಳು ಸಕ್ರಿಯವಾಗಿ ಪಾಲ್ಗೊಂಡು ಹಿರಿಯರು ಹಾಗೂ ಮುನಿಗಳ ಮಾರ್ಗದರ್ಶನವನ್ನು ಪಡೆದುಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಅನೇಕ ಬಾಲಕರು, ಶ್ರಾವಕರು ಹಾಗೂ ಶ್ರಾವಕಿಯರು ಭಾಗವಹಿಸಿದ್ದರು.

ಸರಕಾರದ ಧೋರಣೆಗೆ ಅಲ್ಪಸಂಖ್ಯಾತರ ಆಕ್ರೋಶ ಉರ್ದು ಶಾಲಾ ಶಿಕ್ಷಕರ ನೇಮಕಾತಿಗೆ ಆಗ್ರಹ

ತೇರದಾಳ: ರಾಜ್ಯದಲ್ಲಿಅಂದಾಜುನಾಲ್ಕುಸಾವಿರ ಉರ್ದು ಮಾಧ್ಯಮ ಶಾಲೆಗಳಿವೆ. ಮೂರು ಸಾವಿರದಷ್ಟು ಉರ್ದು ಶಿಕ್ಷಕರ ಹುದ್ದೆಗಳು ಖಾಲಿ ಇವೆ. ಆದ್ದರಿಂದ ಸರಕಾರ ಕೂಡಲೇ ಉರ್ದು ಮಾಧ್ಯಮ ಶಿಕ್ಷಕರ ನೇಮಕಾತಿಗೆ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿ ತೇರದಾಳ ತಾಲೂಕಿನ ಹನಗಂಡಿ ಗ್ರಾಮದ ಅಂಜುಮನ್ ಇಸ್ಲಾಮ್ ಕಮೀಟಿ ತೇರದಾಳ ತಹಸೀಲ್ದಾರ್ ವಿಜಯಕುಮಾರ ಕಡಕೋಳ ಅವರಿಗೆ ಮನವಿ ಸಲ್ಲಿಸುವ ಮೂಲಕ ಸರಕಾರಕ್ಕೆ ಆಗ್ರಹಿಸಿದೆ.

ರಾಜ್ಯ ಸರಕಾರ ಹದಿನೈದು ಸಾವಿರ ಜನ ಶಿಕ್ಷಕರ ನೇಮಕಾತಿಗೆ ಅಧಿಸೂಚನೆ ಹೊರಡಿಸಿದೆ. ಮೂರು ಸಾವಿರದಷ್ಟು ಉರ್ದು ಮಾಧ್ಯಮ ಶಿಕ್ಷಕರ ಹುದ್ದೆಗಳು ಖಾಲಿ ಇದ್ದರೂ ಉರ್ದು ಮಾಧ್ಯಮಕ್ಕೆ ಹಂಚಿಕೆ ಮಾಡದೆ ಕಡೆಗಣಿಸಲಾಗಿದೆ. ಬಾಗಲಕೋಟೆ ಜಿಲ್ಲೆ ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಉರ್ದು ಮಾಧ್ಯಮ ಶಿಕ್ಷಕರು ಇಲ್ಲದ ಕಾರಣ



ಗ್ರಾಮೀಣ ಪ್ರದೇಶದ ಮಕ್ಕಳ ಕಲಿಕೆಯ ಮೇಲೆ ವಿಪರೀತ ಪರಿಣಾಮ ಬೀರುತ್ತಿದೆ. ಉರ್ದು ಮಾಧ್ಯಮವನ್ನು ಕಡೆಗಣಿಸುತ್ತಿರುವುದು ಖಂಡನೀಯವಾಗಿದೆ. ಅದರಲ್ಲೂ ಗಣಿತ, ಸಮಾಜ ವಿಜ್ಞಾನ, ವಿಜ್ಞಾನ ವಿಷಯಗಳ ಶಿಕ್ಷಕರು ಇಲ್ಲದ ಕಾರಣ ಮಕ್ಕಳ ಕಲಿಕಾ ಮಟ್ಟ ಕುಸಿಯುವಂತಾಗಿದೆ.

ಕೂಡಲೇ ಉರ್ದು ಮಾಧ್ಯಮ ಶಿಕ್ಷಕರ ನೇಮಕಾತಿಗೆ ಸರಕಾರ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ಬೀದಿಗಿಳಿದು ಜಿಲ್ಲಾದ್ಯಂತ ಹೋರಾಟ ನಡೆಸಲಾಗುವುದು ಎಂದು ಅಂಜುಮನ್ ಇಸ್ಲಾಂ ಕಮೀಟಿ ತಿಳಿಸಿದೆ.

ಜಾತ್ರೆಗಳ ಯಶಸ್ಸಿಗೆ ಪೋಲಿಸರೊಂದಿಗೆ ಗ್ರಾಮಸ್ಥರ ಸಹಕಾರ ಅಗತ್ಯ

ಚಿಮ್ಮಡ : ಜಾತ್ರೆ, ಹಬ್ಬ ಹರಿದಿನಗಳ ಯಶಸ್ಸಿಗೆ ಪೋಲಿಸ್ ಇಲಾಖೆಯೊಂದಿಗೆ ಗ್ರಾಮಸ್ಥರ ಸಹಕಾರ ಅಗತ್ಯವೆಂದು ಬನಹಟ್ಟಿ ಸಿಪಿಐ ಆರ್. ಆರ್. ಪಾಟೀಲ ಹೇಳಿದರು.

ಗ್ರಾಮದಲ್ಲಿ ಸಪ್ಟೆಂಬರ 24 ರಂದು ನಡೆಯಲಿರುವ ಕಿಚಡಿ ಜಾತ್ರೆಯ ಪ್ರಯುಕ್ತ ಸಾರ್ವಜನಿಕರ ಸುರಕ್ಷತೆ–ಗಾಗಿ ಕೈಗೊಳ್ಳಬೇಕಾಗಿರುವ ಕ್ರಮಗಳು, ನೇಮಿಸಬೇಕಾದ ಸಿಬ್ಬಂದಿಗಳ ಕಾರ್ಯಗಳು, ಸುವ್ಯವಸ್ಥೆಗಾಗಿ ಗುರುವಾರ ಹಮ್ಮಿಕೊಳ್ಳಲಾದ ಪರಿಶೀಲನಾ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು ಜಾತ್ರೆ ಹಾಗೂ ಗಣೇಶ ವಿಸರ್ಜನೆ ಈ ಬಾರಿ ಏಕ ಕಾಲದಲ್ಲಿಯೇ ಬಂದಿರುವುದರಿಂದ ಹೆಚ್ಚಿನ ಸಿಬ್ಬಂದಿ ಒದಗಿಸುವಂತೆ ಮೇಲಾಧಿಕಾರಿಗಳಿಗೆ ಮನವಿ ಮಾಡಲಾಗಿದ್ದು ಆದಾಗ್ಗಿಯೂ ಜಾತ್ರೆ ಹಾಗೂ ರಥೋತ್ಸವ

ಮುಕ್ತಾಯದವರೆಗೆ ನಮ್ಮ ಸಿಬ್ಬಂದಿಯೊಂದಿಗೆ



ಗ್ರಾಮದ ಯುವಕರು ನಮ್ಮೊಂದಿಗೆ ಸಹಕಾರ ನೀಡಿದಲ್ಲಿ ಕಾರ್ಯಕ್ರಮ ಮುಗಿಯುವವರೆಗೆ ಸ್ಥಳದಲ್ಲಿಯೇ ಉಪಸ್ಥಿತರಿದ್ದು ಸಂಪೂರ್ಣ ಸುರಕ್ಷತೆ ಹಾಗೂ ಮಾರ್ಗದರ್ಶನ ನೀಡಲಾಗುವುದು ಎಂದರು.

ಠಾಣಾಧಿಕಾರಿ ಶಿವರಾಜ ಧರಿಗೋಣ ಮಾತನಾಡಿ ಜಾತ್ರೆಯಲ್ಲಿ ಎಲ್ಲಾ ಕಡೆಯೂ ಸಿಸಿಟಿವಿ ಕ್ಯಾಮರಾಗಳನ್ನು ಹೆಚ್ಚಿನ ಪ್ರಮಾಣದಲ್ಲಿ ಅಳವಡಿಸಿದಲ್ಲಿ ಕಳ್ಳತನ ಹಾಗೂ ಚುಡಾಯಿಸುವ ಪ್ರಕರಣಗಳನ್ನು ತಡೆಯಬಹುದು.

ಜಾತ್ರೆಯನ್ನು ಉತ್ತಮ ರೀತಿಯಲ್ಲಿ ನಿರ್ವಹಣೆ ಮಾಡುವ ಮೂಲಕ ಪ್ರಭುವಿನ ಋಣ ತೀರಿಸುತ್ತೇವೆ ಎಂದರು.

ಗ್ರಾಮ ಪಂಚಾಯಿತಿಯ ಮಾಜಿ ಅಧ್ಯಕ್ಷ ಗುರುಲಿಂಗಪ್ಪ ಪೂಜಾರಿ, ಪರಪ್ಪಾ ಪಾಲಭಾಂವಿ ಮಾತನಾಡಿದರು.

ಪ್ರಭುಲಿಂಗೇಶ್ವರ ಸೇವಾ ಸಮಿತಿಯ ಪ್ರಮುಖರಾದ ರಾಮಣ್ಣ ಮುಗಳಖೋಡ, ಪುಂಡಲಿಕಪ್ಪ ಪೂಜಾರಿ, ಅಣ್ಣಪ್ಪಗೌಡ ಪಾಟೀಲ, ಬಾಳಪ್ಪ ಹಳಿಂಗಳಿ, ರಾಮಣ್ಣ ಬಗನಾಳ, ಈಶ್ವರ ಬಡಿಗೇರ, ಬಿ. ಎಸ್. ಪಾಟೀಲ, ರಾಚಯ್ಯ ಮಠಪತಿ, ಗ್ರಾಮ ಪಂಚಾಯತ್ ಮಾಜಿ ಅಧ್ಯಕ್ಷ ಶಂಕರ ಬಟಕುರ್ಕಿ, ಬೀರಪ್ಪ ಹಳೆಮನಿ, ರಾಜು ಬಗನಾಳ, ದುಂಡಪ್ಪ ಪಾಟೀಲ, ಚಂದ್ರಕಾಂತ ಜಾಡಗೌಡರ, ಅಶೋಕ ಧಡೂತಿ, ಪ್ರಭು ನೇಸೂರ, ಬಸವರಾಜ ಕುಂಚನೂರ, ಪ್ರಭು ಮುಧೋಳ ಸೇರಿದಂತೆ ಹಲವಾರು ಜನ ಪ್ರಮುಖರು ಉಪಸ್ಥಿತರಿದ್ದರು. ಪೋಲಿಸ ಸಿಬ್ಬಂದಿ ಪಿ.ವಿ. ಹಲಗತ್ತಿ ಹಾಗೂ ಬಿ. ಜಿ. ಹೂಗಾರ ಕಾರ್ಯಕ್ರಮ ನಿರ್ವಹಿಸಿದರು.

ಮನಗೂಳಿ ಕೃಷಿ ಸಹಕಾರ ಸಂಘದ ವಾರ್ಷಿಕ ಸಭೆ

ಸಾಲ ವಿತರಣೆ, ವಸೂಲಿ ರೈತರ ಸಮಸ್ಯೆ ಸೇರಿದಂತೆ ಹಲವು ವಿಷಯಗಳ ಕುರಿತು ಚರ್ಚೆ



ಮನಗೂಳಿ : ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘ ನಿ., ಮನಗೂಳಿ ವತಿಯಿಂದ 2025–26ನೇ ಸಾಲಿನ ವಾರ್ಷಿಕ ವರದಿ ಹಾಗೂ ಆಡಳಿತ ಪತ್ರಿಕೆ ಬಿಡುಗಡೆ ಹಾಗೂ ವಾರ್ಷಿಕ ಸಭೆ ಇಂದು ನಡೆಯಿತು.

ಮನಗೂಳಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ರೈತರು ಹಾಗೂ ಸಂಘದ ಸದಸ್ಯರು ಭಾಗವಹಿಸಿ, ಈ ಸಭೆಯಲ್ಲಿ ಸಂಘದ 2025–26ನೇ ಸಾಲಿನ ಆರ್ಥಿಕ ವ್ಯವಹಾರಗಳು, ಸಾಲ ವಿತರಣೆ, ಸಾಲ ವಸೂಲಿ, ಠೇವಣಿ, ಸದಸ್ಯರ ಹಿತಾಸಕ್ತಿ ಹಾಗೂ ಸಂಘದ ಮುಂದಿನ ಕಾರ್ಯಚಟುವಟಿಕೆಗಳ ಕುರಿತು ಚರ್ಚೆ ನಡೆಯುವ ನಡೆಯಿತು.

ವಿಶೇಷವಾಗಿ ರೈತರಿಗೆ ಸಮಯಕ್ಕೆ ಸರಿಯಾಗಿ ಕೃಷಿ ಸಾಲ ದೊರೆಯುತ್ತಿದೆಯೇ, ಸಾಲ ಪಡೆಯುವ ಸಂದರ್ಭದಲ್ಲಿ ಎದುರಾಗುತ್ತಿರುವ ಸಮಸ್ಯೆಗಳೇನು, ಸಾಲ ಮರುಪಾವತಿಯಲ್ಲಿ ರೈತರಿಗೆ ಆಗುತ್ತಿರುವ ತೊಂದರೆಗಳು, ಬಾಕಿ ಸಾಲಗಳ ವಸೂಲಾತಿ ಹಾಗೂ ಸಂಘದ ಆರ್ಥಿಕ ಸ್ಥಿತಿಗತಿ ಕುರಿತು ಸದಸ್ಯರು ತಮ್ಮ ಅಭಿಪ್ರಾಯಗಳನ್ನು ಮಂಡಿಸಿದರು .

ಇದರೊಂದಿಗೆ ರಸಗೊಬ್ಬರ, ಬೀಜ, ಕೃಷಿ ಪರಿಕರಗಳ ಪೂರೈಕೆ, ಬೆಳೆ ಸಾಲ, ರೈತರ ಅಗತ್ಯಗಳಿಗೆ ಅನುಗುಣವಾಗಿ ಸಂಘದಿಂದ ನೀಡಬಹುದಾದ ಸೌಲಭ್ಯಗಳು ಸೇರಿದಂತೆ ಹಲವು ವಿಚಾರಗಳು ಸಭೆಯಲ್ಲಿ ಚರ್ಚೆಗೆ ಮಾಡಲಾಯಿತು.

ಸಂಘದ ಲಾಭ–ನಷ್ಟದ ಲೆಕ್ಕಾಚಾರ, ಆಡಳಿತಾತ್ಮಕ ವಿಷಯಗಳು ಹಾಗೂ ಸದಸ್ಯರಿಗೆ ಹೆಚ್ಚಿನ ಅನುಕೂಲ ಕಲ್ಪಿಸುವ ಕುರಿತು ಸದಸ್ಯರಿಂದ ಸಲಹೆ–ಸೂಚನೆಗಳು ಕೇಳಿ ಬಂದಿತ್ತು .

ಕೆಲವು ವಿಷಯಗಳಲ್ಲಿ ಸದಸ್ಯರು ಪ್ರಶ್ನೆಗಳನ್ನು ಕೇಳಿ, ಆಡಳಿತ ಮಂಡಳಿಯಿಂದ ಸ್ಪಷ್ಟನೆ ಪಡೆದುಕೊಂಡಿತು. ರೈತರ ಹಿತಾಸಕ್ತಿ ಮತ್ತು ಸಂಘದ ಅಭಿವೃದ್ಧಿ ಕುರಿತು ಚರ್ಚೆ ಹಾಗೂ ವಾದ–ಪ್ರತಿವಾದಗಳು ನಡೆದವು.

ಸಂಘವನ್ನು ಇನ್ನಷ್ಟು ಬಲಪಡಿಸುವ ನಿಟ್ಟಿನಲ್ಲಿ ಸದಸ್ಯರಿಂದ ರಚನಾತ್ಮಕ ಸಲಹೆಗಳು ವ್ಯಕ್ತವಾಗಿತ್ತು.

ಸೆ.17ರಂದುಗುರುವಾರಬೆಳಿಗ್ಗೆ11.30ಕ್ಕೆಸಂಘದ ಸಭಾ ಭವನದಲ್ಲಿ ಸಭೆ ನಡೆಯಲಿದ್ದು, ಸಂಘದ ಅಧ್ಯಕ್ಷರು, ಆಡಳಿತ ಮಂಡಳಿ ಸದಸ್ಯರು, ಸಿಬ್ಬಂದಿ ಹಾಗೂ ಸದಸ್ಯರು ಉಪಸ್ಥಿತರಿದ್ದರು. ಸಂಘದ ಎಲ್ಲಾ ಸದಸ್ಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸಭೆಯಲ್ಲಿ ತಮ್ಮ ಅಭಿಪ್ರಾಯ, ಸಲಹೆ ಹಾಗೂ ಸಮಸ್ಯೆಗಳನ್ನು ಮುಕ್ತವಾಗಿ ಹಂಚಿಕೊಂಡರು.

Printed by Published by ASHWARYA PALLATE on behalf of ASHWARYA PALLATE, Printed at DHARIDEEPA PRINTERS & PUBLISHERS, NO. 74, 4TH MAIN, 7TH CROSS NEAR CHOWDESHWARI TEMPLE, KAVERINAGAR, MAHADEVAPURA, BENGALURU, KARNATAKA - 560048. and Published at BASAVESHWAR CIRCLE, 4TH CROSS, NEKAR NAGAR, HUBLI, OLD HUBLI, DHARWAD, KARNATAKA - 580024. Editor ASHWARYA PALLATE